ಸಂಪುಟ : 8 ಸಂಚಿಕೆ : 225 ಪುಟ : 4 ಬೆಲೆ : 3.00 ಗುರುವಾರ ಅಕ್ಟೋಬರ್ 12, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 225 Pages : 4 Price : 3.00 Thursday October 12, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ ಅವಳಿ ನಗರದಲ್ಲಿ ಇಂದು ನೀರು ಪೂರೈಕೆ ಎಲ್ಲೆಲ್ಲಿ?

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಅಕ್ಟೋಬರ್ 12 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 35 ಇ ಡಬ್ಲೂ ಎಸ್ 1 ನೇ ಕ್ರಾಸ್, ಈಶ್ವರ್ ಗುಡಿ ಲೈನ್, ಶರಣ ಬಸವೇಶ್ವರ ಸ್ಕೂಲ್ ಲೈನ್, ಭಾರತ ಗಾರ್ಡನ್ ಹನುಮಾನ ಗುಡಿ ಲೈನ್, ವಾರ್ಡ್ ನಂ. 33 ಝಕೀರ್ ಹುಸೇನ್ ಕಾಲೋನಿ, ಪಂಚಮುಖಿ ದೇವಸ್ಥಾನ ಲೈನ್, ಬೆಲ್ಲದ ಬಾಕಳೆ ಲೈನ್, ಕರಿಗೌಡ್ರು ಲೈನ್, ಸಾಹುಕಾರ ತೋಟ ಭಾಗ 1,2, ಬಾಕಳೆ ಲೈನ್, ಟೋಪಿವಾಲೆ ಲೈನ್, ಜಯಶ್ರೀ ಪವಾರ ಲೈನ್, ಗಡ್ಡಿ ಅವರ ಲೈನ್, ಮೇರವಾಡೆ ಲೈನ್, ಬೂದಿಹಾಳ ಡಾಕ್ಟರ್ ಲೈನ್, ಕೇಶವ ನಗರ ಭಾಗಗಳು, ಅಪಾರ್ಟ್‌ಮೆಂಟ್ ಲೈನ, ವಾರ್ಡ್ ನಂ. 22 ಗಂಗಿಮಡಿ ಅಪಾರ್ಟ್‌ಮೆಂಟ್ ಲೈನ್, ಮಸೂತಿ ಮೇಲಿನ ಭಾಗ, ದಖನಿ ಲೈನ್, ಮಾರುತಿ ಅವರ ಲೈನ್, ಈಶ್ವರ್ ದೇವರ ಗುಡಿ ಲೈನ್, ಗಿರಿಣಿ ಅವರ ಲೈನ್, ಧಾರವಾಡದ ಲೈನ್, ವಾರ್ಡ್ ನಂ. 29 ಡಂಬಳದವರ ಲೈನ್, ಸುಡಗಾಡ ಸಿದ್ದರ ಓಣಿ, ಪೊಲೀಸ್ ಸ್ಟೇಶನ್ ಕೆಳಗಿನ ಭಾಗ, ಕಂಬಳವರ ಲೈನ್, ಮಸೂತಿ ಲೈನ್, ರಾಜೀವ ಗಾಂಧಿ ನಗರ,

ವಾರ್ಡ್ ನಂ 7 ಹುಚ್ಚನಗೌಡ್ರ ಓಣಿ, ಹಳೆ ಪೋಸ್ಟ್ ಆಫೀಸ್ ಲೈನ್, ಗೋಡಿ ಅವರ ಲೈನ್, ಬಾಗಲಕೋಟಿ ಅವರ ಲೈನ್, ಬಾರಕೇರ ಲೈನ್, ಕಿಲ್ಲಾ ಓಣಿ, ಪನಿಬಂದ್ ಲೈನ್, ತಟ್ಟಿಯವರ ಲೈನ್, ರಂಗಪ್ಪಜ್ಜನ ಮಠ ಕೆಲವು ಉಳಿದ ಭಾಗಗಳು.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ.ಜಾ/ಪ.ವರ್ಗದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

## ಎಸ್.ಸಿ/ ಎಸ್.ಟಿ ಕಾಲೋನಿಗೆ ಸಿಸಿ ಕ್ಯಾಮೆರಾ ಅಳವಡಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ಸಿ. ಎಸ್.ಟಿ. ಕಾಲೋನಿಗೆ ಕುಡಿಯುವ ನೀರು, ವಿದ್ಯುತ್, ರಸ್ತೆ ಸೌಲಭ್ಯದಂತಹ ಮೂಲಭೂತ ಸೌಕರ್ಯಗಳೊಂದಿಗೆ ನಾಗರಿಕರ ಹಿತರಕ್ಷಣೆಗೆ ಹಾಗೂ ಅಕ್ರಮ ಚಟುವಟಿಕೆಗಳ ನಿಯಂತ್ರಣಕ್ಕಾಗಿ ಉತ್ತಮ ಗುಣಮಟ್ಟದ ಸಿಸಿ ಕ್ಯಾಮರಾ ಅಳವಡಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕು ಪಂಚಾಯತ್‌ನಲ್ಲಿ ಕಾಲೋನಿಗಳನ್ನು ಆಯ್ಕೆ ಮಾಡಿ ಸಿಸಿ ಕ್ಯಾಮರಾ ಅಳವಡಿಕೆಗೆ ಕ್ರಮ ವಹಿಸಬೇಕು ಮತ್ತು ಸಿಸಿ ಕ್ಯಾಮೆರಾದ



ನಿಯಮಿತ ನಿರ್ವಹಣೆಯೂ ಸಹ ಅವಶ್ಯಕವಾಗಿದೆ. ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ಹಾಸ್ಟೆಲ್‌ಗಳಲ್ಲಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ವಿತರಣೆಯಾಗಬೇಕು. ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ಗುಣಮಟ್ಟದ ಊಟ, ವಸತಿ ಹಾಗೂ ಶಿಕ್ಷಣದ ಅಗತ್ಯತೆಯಿದೆ. ಈ ನಿಟ್ಟಿನಲ್ಲಿ ಹಾಸ್ಟೆಲ್‌ನಲ್ಲಿಯ ಸೌಲಭ್ಯಗಳು ಸದುಪಯೋಗವಾಗುವಂತೆ ಇಲಾಖೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಮಾತನಾಡಿ, ಇಲಾಖೆಯಿಂದ ನಿಯಮಿತವಾಗಿ ದೌರ್ಜನ್ಯ ನಿಯಂತ್ರಣ ಸಭೆಗಳನ್ನು ನಡೆಸಲಾಗುತ್ತಿದೆ. ನಗರದಲ್ಲಿರುವ ಸರ್ಕಲ್‌ಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿದಂತೆಯೇ ಎಸ್.ಸಿ/ಎಸ್.ಟಿ. ಕಾಲೋನಿಗಳಲ್ಲಿ ಸಿ.ಸಿ.ಕ್ಯಾಮೆರಾ ಅಳವಡಿಕೆಗೆ ಪೊಲೀಸ್ ಇಲಾಖೆಯ ಸಂಪೂರ್ಣ ಸಹಕಾರವಿದೆ. ಗ್ರಾಮ ಪಂಚಾಯತ್‌ನಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಆದ್ಯತೆ ಮೇಲೆ ಕಾಲೋನಿಗಳ ಆಯ್ಕೆಗೆ ಕ್ರಮ ವಹಿಸಬೇಕು. ಸಿಸಿ ಕ್ಯಾಮೆರಾ ಅಳವಡಿಕೆ ಕುರಿತು ಡಾಟಾ ಎಂಟ್ರಿ ಮಾಡಿ ಗೂಗಲ್ ಮ್ಯಾಪಿಂಗ್ ಮಾಡಿ ಪೊಲೀಸ್ ಇಲಾಖೆಗೆ ವರದಿ ನೀಡಬೇಕು. ಅಂದರೆ ಕಾಲೋನಿಗಳಲ್ಲಿ ಸಂಭವಿಸುವ ಕಳ್ಳತನ ಹಾಗೂ ಅನೈತಿಕ ಚಟುವಟಿಕೆ ತಡೆಯಲು ಸಹಾಯವಾಗುತ್ತದೆ ▶▶ 3ನೇ ಪುಟಕ್ಕೆ

> ಅಬಕಾರಿ ಇಲಾಖೆಯಿಂದ ಅಕ್ರಮವಾಗಿ ಸರಾಯಿ ಮಾರಾಟ ಮಾಡುವವರು ಹಾಗೂ ಸಾಗಾಟ ಮಾಡುವವರನ್ನು ಗುರುತಿಸಿ ಶಿಸ್ತು ಕ್ರಮ ಕೈಗೊಳ್ಳಬೇಕು. ಜೊತೆಗೆ ನಿಯಮಿತವಾಗಿ ಗ್ರಾಮಗಳಲ್ಲಿ ಸಭೆ ನಡೆಸುವ ಮೂಲಕ ಅಕ್ರಮ ಸರಾಯಿ ಚಟುವಟಿಕೆಗಳನ್ನು ನಿರ್ಬಂಧಿಸಬೇಕು.
>
> **–ವೈಶಾಲಿ.ಎಂ.ಎಲ್.** ಜಿಲ್ಲಾಧಿಕಾರಿಗಳು, ಗದಗ

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಮಾತನಾಡಿ, 1-7-2023 ರಿಂದ 30-9-2023 ರವರೆಗೆ ರೋಣ ತಾಲೂಕಿನಲ್ಲಿ ಜಾತಿ ನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ 25 ಸಾವಿರ ರೂ ಪರಿಹಾರಧನ ವಿತರಿಸಲಾಗಿದೆ. ಗದಗ ತಾಲೂಕಿನಲ್ಲಿ ಒಟ್ಟು 8 ಜಾತಿ ನಿಂದನೆ ಪ್ರಕರಣಗಳಾಗಿದ್ದು, ಆ ಪೈಕಿ 2 ಪ್ರಕರಣಗಳಿಗೆ ಒಂದು ಲಕ್ಷ ರೂ. ಪರಿಹಾರ ಧನ ನೀಡಲಾಗಿದೆ. ದಿ:1-7-2023 ರಿಂದ 30-9-2023 ರವರೆಗೆ ಒಟ್ಟು 11 ದೌರ್ಜನ್ಯ ಪ್ರಕರಣಗಳು ಸಲ್ಲಿಕೆಯಾಗಿದ್ದು, 15 ಸಂತ್ರಸ್ತರಿಗೆ 22.74 ಲಕ್ಷ ರೂ. ಪರಿಹಾರ ಧನ ವಿತರಿಸಲಾಗಿದೆ. ಅಸ್ಪೃಶ್ಯತಾ ನಿರ್ಮೂಲನೆಗೆ ಸೂಕ್ತ ಕ್ರಮ ವಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

### ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿ.ಸಿ ವೈಶಾಲಿ. ಎಂ.ಎಲ್. ಸೂಚನೆ

## ನಿಗದಿಪಡಿಸಿದ ಆರ್ಥಿಕ, ಭೌತಿಕ ಗುರಿ ಸಾಧನೆಗೆ ಕಾರ್ಯಪ್ರವೃತ್ತರಾಗಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಪ.ಜಾ/ಪ.ಪಂ.ಉಪಹಂಚಿಕೆ ಯೋಜನೆಗೆ ಸಂಬಂಧಿಸಿದಂತೆ ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯಗಳನ್ನು ನಿಗದಿತ ಕಾಲಾವಧಿಯಲ್ಲಿಯೇ ದೊರಕಿಸಿ ಕೊಡಲು ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂದಿನ 2-3 ತಿಂಗಳ ನಂತರ ಯಾವುದೇ ಸಂದರ್ಭದಲ್ಲಾದರೂ ಲೋಕಸಭೆ ಚುನಾವಣೆ ಎದುರಾಗಬಹುದು ಇಲ್ಲವೇ ಅದಕ್ಕೂ ಮೊದಲೇ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳು ಬಂದರೂ ಸಹ ಚುನಾವಣಾ ಕಾರ್ಯದಲ್ಲಿ ನಿಗದಿಪಡಿಸಿದ ಗುರಿ ಸಾಧನೆಗೆ ಹಿನ್ನೆಡೆಯುಂಟಾಗಬಹುದು, ಹಾಗಾಗಿ ಅಧಿಕಾರಿಗಳು ತಮ್ಮ ಇಲಾಖೆಗಳಿಗೆ ನೀಡಿದ ಆರ್ಥಿಕ ಹಾಗೂ ಭೌತಿಕ ಗುರಿ ಸಾಧನೆಯಡೆಗೆ ಗಮನ ಹರಿಸುವಂತೆ ಸೂಚಿಸಿದರು.

ಪ.ಜಾ/ಪ.ಪಂ. ಉಪಹಂಚಿಕೆ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯಿರಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ವಿಳಂಬವಾಗದೇ ಶೀಘ್ರಗತಿಯಲ್ಲಿ ತಲುಪುವಂತಾಗಬೇಕು. ಯೋಜನೆಯ ಅನುಷ್ಠಾನದಲ್ಲಿ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧನೆ ಅತಿ ಮುಖ್ಯವಾಗಿದ್ದು, ಕ್ರಿಯಾ ಯೋಜನೆ ತಯಾರಾದ ನಂತರ ಟೆಂಡರ್ ಕರೆದು ನಿಗದಿತ ಕಾಲಮಿತಿಯಲ್ಲಿಯೇ ಕಾಮಗಾರಿ ಪೂರ್ಣಗೊಳ್ಳುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು. ಸದರಿ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಹಾಗೂ ಇಲಾಖಾವಾರು ಸಾಧಿಸಿದ ಪ್ರಗತಿ ವಿವರವನ್ನು ಇಲಾಖೆ ಅಂತರ್ಜಾಲದಲ್ಲಿ ತಪ್ಪದೇ ಅಪ್‌ಡೇಟ್ ಮಾಡುವುದು ಕೂಡ ತುಂಬಾ ಮುಖ್ಯವಾಗಿದೆ ಎಂದರು.

ಎಸ್.ಸಿ/ ಎಸ್.ಟಿ. ಪ್ರದೇಶದಲ್ಲಿ ಕೈಗೊಂಡ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಬಿಡುಗಡೆಯಾದ ಅನುದಾನ ಲೋಪವಾಗದಂತೆ ನೋಡಿಕೊಳ್ಳಬೇಕು. ಇಲಾಖೆಯ ಅಧಿಕಾರಿಗಳು ಕಚೇರಿ ಕೆಲಸದ ಸಮಯ ಪರಿಪಾಲನೆ ಮಾಡುವುದು ಅವಶ್ಯಕವಾಗಿದೆ. ತಾಲೂಕು ಮಟ್ಟದಲ್ಲಿಯೂ ಎಸ್.ಸಿ.ಪಿ./ಟಿ.ಎಸ್.ಪಿ. ಸಭೆಯನ್ನು ನಿಯಮಿತವಾಗಿ ಕೈಗೊಳ್ಳಬೇಕು ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ ಮಾತನಾಡಿ, ಇಲಾಖಾವಾರು ನೀಡಲಾದ ಗುರಿ ಹಾಗೂ ಸಾಧಿಸಿದ ▶▶ 3 ನೇ ಪುಟಕ್ಕೆ

### ಪಶು ಆಸ್ಪತ್ರೆಯ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಡಾ. ಚಂದ್ರು ಲಮಾಣಿ

## ಪಶು ಆಸ್ಪತ್ರೆಯ ಅಭಿವೃದ್ಧಿಗೆ ವಿಶೇಷ ಪ್ರಯತ್ನ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪಶು ಆಸ್ಪತ್ರೆಯಲ್ಲಿನ ಕೊರತೆಗಳನ್ನು ನೀಗಿಸಲು ವಿಶೇಷ ಪ್ರಯತ್ನ ಮಾಡುವದರೊಂದಿಗೆ ಇಲ್ಲಿನ ಪಶು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ವಿಶ್ವಾಸವನ್ನು ಸಹ ಹೊಂದಿರುವದಾಗಿ ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಪಶು ಆಸ್ಪತ್ರೆ ಆವರಣದಲ್ಲಿ ಆರ್‌ಐಡಿಎಫ್ ಯೋಜನೆಯಡಿಯಲ್ಲಿ 50.13 ಲಕ್ಷ ರೂಗಳ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

5-6 ದಶಕಗಳಷ್ಟು ಹಳೆಯದಾದ ಇಲ್ಲಿನ ಪಶು ಆಸ್ಪತ್ರೆ ಹಲವಾರು ಸಮಸ್ಯೆಗಳಿಂದ ಬಳಲುತ್ತಿರುವದು ಗಮನಕ್ಕಿದೆ. ಈಗಾಗಲೇ ಪಶುವಾಹಿನಿ ಅಂಬ್ಯುಲೆನ್ಸ್‌ಗೆ ಚಾಲನೆ ನೀಡಲಾಗಿದೆ. ಲಸಿಕಾ ಕಾರ್ಯಕ್ರಮ, ಅವಶ್ಯಕ ಸಿಬ್ಬಂದಿಗಳ ನೇಮಕ ಮತ್ತು ಆಸ್ಪತ್ರೆಗೆ ಅವಶ್ಯವಿರುವ ಸಲಕರಣೆ, ಸುತ್ತಮುತ್ತಲಿನ ಹಳ್ಳಿಗಳಲ್ಲಿನ ಜಾನುವಾರುಗಳಿಗೆ ▶▶ 3ನೇ ಪುಟಕ್ಕೆ

## ತೊಗಲುಗೊಂಬೆ ಪ್ರದರ್ಶನ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಸಹಯೋಗದಲ್ಲಿ ತೊಗಲುಗೊಂಬೆ ಪ್ರದರ್ಶನ ಕಾರ್ಯಕ್ರಮವನ್ನು ನಗರದ ಹಾತಲಗೇರಿ ನಾಕಾ ಹತ್ತಿರದಲ್ಲಿರುವ ಕೆಎಲ್‌ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ ಆವರಣದಲ್ಲಿ ಅ.12ರಂದು ಮಧ್ಯಾಹ್ನ 1 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ರಾಜ್ಯ ಪ್ರಶಸ್ತಿ ವಿಜೇತ ತೊಗಲುಗೊಂಬೆ ಕಲಾವಿದರಾದ ವಿರೂಪಾಕ್ಷಪ್ಪ ಕ್ಷತ್ರಿಯ ಬಿಂಕದಕಟ್ಟಿ ಇವರಿಂದ ಪ್ರದರ್ಶನ ಜರುಗಲಿದೆ. ಈ ಕಾರ್ಯಕ್ರಮದಲ್ಲಿ ಕೆಎಲ್‌ಇ



ಸಂಸ್ಥೆಯ ಪ್ರಾಚಾರ್ಯ ಪಿ.ಜಿ ಪಾಟೀಲ, ವಿಶ್ವನಾಥ ಜಿ., ಡಾ. ನಾಗರಾಜ ಬಡಿಗೇರ, ಪ್ರೊ. ಶಂಭು ತಮ್ಮನಗೌಡರ, ಉಪನ್ಯಾಸಕರು, ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗದವರು ಪಾಲ್ಗೊಳ್ಳುವರು ಎಂದು ಪ್ರಾಚಾರ್ಯ ಪಿ.ಜಿ ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಗ ಕೋರ್ಸ್‌ಗಳಿಗೆ ಪ್ರವೇಶ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರಕಾರದ ಮಾನ್ಯತೆ ಮತ್ತು ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರ ಸಂಯೋಜನೆಯಲ್ಲಿ ಎಸ್‌ವಾಯ್‌ಬಿಎಂಎಸ್ ಯೋಗ ಪಾಠಶಾಲೆಯ ಬಸವ ಯೋಗ ಕೇಂದ್ರ ಸಂಸ್ಥೆಯವರು 2023-24ನೇ ಸಾಲಿಗಾಗಿ ನಡೆಸುವ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ಮತ್ತು ಪಿ.ಜಿ ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್‌ಗಳಿಗೆ ಆಸಕ್ತರಿಂದ ಪ್ರವೇಶ ಅರ್ಜಿ ಆಹ್ವಾನಿಸಿದೆ.



ಯೋಗ ಸರ್ಟಿಫಿಕೇಟ್ ಕೋರ್ಸ್‌ಗೆ ಪ್ರವೇಶ ಪಡೆಯಲು ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ, ಪಿ.ಜಿ ಡಿಪ್ಲೋಮಾ ಕೋರ್ಸ್ ಪ್ರವೇಶ ಪಡೆಯಲು ವಿಶ್ವವಿದ್ಯಾಲಯದಿಂದ ಯಾವುದೇ ಪದವಿ ಪಡೆದಿರಬೇಕು. ಅವಧಿ ಒಂದು ವರ್ಷ, ಎರಡು ಸೆಮಿಸ್ಟರ್ ಇರಲಿದ್ದು, ವಯೋಮಿತಿಯ ನಿರ್ಬಂಧವಿಲ್ಲ.

ನಿಗದಿತ ಅರ್ಜಿಯೊಂದಿಗೆ ಪ್ರವೇಶ ಪಡೆಯಬೇಕು. ಪ್ರವೇಶ ಪಡೆಯಲು ಕೊನೆಯ ದಿನಾಂಕ 31-10-2023. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಬಸವಯೋಗ ಕೇಂದ್ರ, (ಬಸವ ಪ್ರಭೆ ಕ್ಯಾಂಪಸ್), ಸಿದ್ಧಲಿಂಗ ನಗರ, ಗದಗ-582103, ದೂರವಾಣಿ ಸಂಖ್ಯೆ-9448317188, 6360516255 ಸಂಪರ್ಕಿಸಬೇಕೆಂದು ಪ್ರಾಚಾರ್ಯ ಕೆ.ಎಸ್ ಪಲ್ಲೇದ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ದಸರಾ ಕ್ರೀಡಾಕೂಟದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಕ್ರೀಡಾಪಟುಗಳಿಗೆ ಕರೆ

## ಪ್ರತಿಭೆ ಪ್ರದರ್ಶಿಸಿ ದೇಶದ ಅಮೂಲ್ಯ ಆಸ್ತಿಗಳಾಗಿ




**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ಕ್ರೀಡಾಪಟುಗಳು ತಮ್ಮ ಪ್ರತಿಭೆಯನ್ನು ಕ್ರೀಡೆಗಳಲ್ಲಿ ಪ್ರದರ್ಶನ ಮಾಡಿ, ರಾಷ್ಟ್ರೀಯ, ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕಗಳನ್ನು ಗೆದ್ದು ದೇಶದ ಅಮೂಲ್ಯ ಆಸ್ತಿಗಳಾಗಿ ಎಂದು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಬುಧವಾರ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ದಸರಾ ಕ್ರೀಡಾ ಉಪಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟ, ಸಿ ಎಂ ಕಪ್-2023 ರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾನು 16ನೇ ವಯಸ್ಸಿನಲ್ಲಿ ಇದ್ದಾಗ ಜಾವಲಿನ್ ಎಸೆತಕ್ಕೆ ಹಾಗೂ 14.5 ಕಿಮೀ ಓಟದ ಸ್ಪರ್ಧೆಯಲ್ಲಿ ಭಾಗವಹಿಸಲು ಈ ಕ್ರೀಡಾಂಗಣಕ್ಕೆ ಬಂದಿದ್ದೆ. ಇಂದು ಈಗ ಉದ್ಘಾಟನೆಗೆ ಬಂದಿದ್ದೇನೆ ಎಂದರು.

ಶ್ರಮ ಇದ್ದಲ್ಲಿ ಫಲ ಇರುತ್ತದೆ. ನೀವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಪದಕಗಳನ್ನು ಗೆಲ್ಲಿ ಎಂದು ಹಾರೈಸಿದರು.

ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು ಹಾಗೂ ಪರಿಶಿಷ್ಟ ಪಂಗಡಗಳ ಇಲಾಖೆಯ ಸಚಿವರಾದ ನಾಗೇಂದ್ರ ಮಾತನಾಡಿ, ರಾಜ್ಯದ 5 ವಿಭಾಗಗಳಿಂದ ಕ್ರೀಡಾಪಟುಗಳು ಆಗಮಿಸಿ ಸ್ಪರ್ಧೆಗಳಲ್ಲಿ ಭಾಗವಹಿಸುತ್ತಿದ್ದಾರೆ. ಮಳೆ ಅಭಾವ ಇದ್ದರೂ ಕ್ರೀಡೆಗೆ ಪ್ರೋತ್ಸಾಹ ಕಡಿಮೆ ಮಾಡಿಲ್ಲ. ಕ್ರೀಡಾಪಟುಗಳು ತಮ್ಮ ಪ್ರತಿಭೆಯನ್ನು ವ್ಯಕ್ತಪಡಿಸಲು ಉತ್ತಮ ವೇದಿಕೆ. ದಸರಾ ಆರಂಭದಲ್ಲಿ ಕೇವಲ 10 ಕ್ರೀಡೆಗಳು ಇತ್ತು. ಈಗ 35 ಕ್ರೀಡೆಗಳಲ್ಲಿ 10 ಸಾವಿರ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ ಎಂದರು.

ಚೀನಾದಲ್ಲಿ ನಡೆದ ಏಷ್ಯನ್ ಕ್ರೀಡಾಕೂಟದಲ್ಲಿ ಕರ್ನಾಟಕದ ಕ್ರೀಡಾಪಟುಗಳು ಪದಕಗಳನ್ನು ಪಡೆದಿದ್ದಾರೆ. ಈ ಕ್ರೀಡಾಪಟುಗಳಿಗೆ ಸನ್ಮಾನ ಮಾಡಿ ಪ್ರೋತ್ಸಾಹ ಧನ ನೀಡಲಾಗುವುದು. ಕ್ರೀಡೆಗೆ ಸರ್ಕಾರದಿಂದ ಪ್ರೋತ್ಸಾಹ ನೀಡಲು ಪದಕ ಪಡೆದ ಕ್ರೀಡಾಪಟುಗಳಿಗೆ ಸರ್ಕಾರಿ ಕೆಲಸದಲ್ಲಿ ಶೇಕಡಾ 3 ರಷ್ಟು ಮೀಸಲಾತಿ ನೀಡಲು ಕ್ರಮ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ತನ್ವೀರ್ ಸೇಠ್ ಮಾತನಾಡಿ, ಕ್ರೀಡಾ ಮನೋಭಾವದಿಂದ ಕ್ರೀಡೆಯಲ್ಲಿ ಭಾಗವಹಿಸಬೇಕು. ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ. ಇಲ್ಲಿ ಭಾಗವಹಿಸುವಿಕೆ ಮುಖ್ಯ. ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಮೈಸೂರಿನಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ಅಗತ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬೆಳಗಾವಿ ವಿಭಾಗ ಹಾಗೂ ಕಲ್ಬುರ್ಗಿ ವಿಭಾಗದ ಕ್ರೀಡಾಪಟುಗಳು ▶▶ 3ನೇ ಪುಟಕ್ಕೆ


## ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಗದಗ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರ್‌ಗೌಡ ಜಿ ರಾಮತ್ನಾಳ ಅವರ ಗದಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಅಕ್ಟೋಬರ್ 12 ರಂದು ಕುಷ್ಟಗಿಯಿಂದ ಗದುಗಿಗೆ ಪ್ರಯಾಣಿಸಿ ವಾಸ್ತವ್ಯ ಮಾಡುವರು. ಅಕ್ಟೋಬರ್ 13 ರಂದು ಬೆಳಿಗ್ಗೆ 8 ಗಂಟೆಗೆ ಗದಗ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಬೆ 10 ಗಂಟೆಗೆ ಎಲ್ಲ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದೊಂದಿಗೆ ತಾಲೂಕು ಮಟ್ಟದ ಸಮಿತಿಗಳ ರಚನೆ ಮತ್ತು ಅವುಗಳ ಕಾರ್ಯ ಚಟುವಟಿಕೆಗಳ ಕುರಿತು ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 2.30 ಗಂಟೆಗೆ ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್.ಪಿ ಮತ್ತು ಸಿ.ಆರ್.ಪಿ., ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ನಂತರ ಸಂಜೆ 5 ಗಂಟೆಗೆ ಕುಷ್ಟಗಿಗೆ ಮರು ಪ್ರಯಾಣ ಮಾಡುವರು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಕಾವೇರಿಗಾಗಿ ತಮಿಳುನಾಡು ಬಂದ್



**■ ವಿಜಯಸಾಕ್ಷಿ ಸುದ್ದಿ, ಚೆನ್ನೈ**

ಕರ್ನಾಟಕ ಕಾವೇರಿ ನೀರು ಸರಿಯಾಗಿ ಬಿಡುತ್ತಿಲ್ಲ ಎಂದು ಆರೋಪಿಸಿ ನೆರೆಯ ತಮಿಳುನಾಡಿನಲ್ಲಿ ಆಕ್ರೋಶ ಭುಗಿಲೆದ್ದಿದೆ. ವಿವಿಧ ರೈತಪರ ಸಂಘಟನೆಗಳು ಮತ್ತು ಡಿಎಂಕೆ ರೈತ ಘಟಕದ ಸದಸ್ಯರು ಸೇರಿ ಕಾವೇರಿಗಾಗಿ ಬುಧವಾರ ತಮಿಳುನಾಡು ಬಂದ್ ನಡೆಸಿದರು.

ಕಾವೇರಿ ಹರಿಯುವ ಜಿಲ್ಲೆಗಳ ವ್ಯಾಪಾರಸ್ಥರು ಬುಧವಾರ ಸಂಪೂರ್ಣ ಬಂದ್ ಮಾಡಿ ಆಕ್ರೋಶ ಹೊರಹಾಕಿದ್ದಾರೆ. ಈ ಪೈಕಿ ತಿರುಚ್ಚಿ, ತಂಜಾವೂರ್, ನಾಗಾಪಟ್ಟಣಂ ಸೇರಿದಂತೆ ಜೀವನದಿ ಕಾವೇರಿ ಹರಿಯುವ ಪ್ರತಿ ಜಿಲ್ಲೆಯಲ್ಲೂ ಹೋರಾಟ ಜೋರಾಗಿದೆ. ಹೋರಾಟದಲ್ಲಿ ರೈತರು ಕೇಂದ್ರದ ಮಧ್ಯಪ್ರವೇಶ ಮತ್ತು ಕಾವೇರಿ ಸಮಸ್ಯೆ ಬಗೆಹರಿಸಲು ಪ್ರಧಾನಿ ಮಧ್ಯಸ್ಥಿಕೆ ವಹಿಸಬೇಕೆಂದು ಆಗ್ರಹಿಸಿದ್ದಾರೆ.

ಕರ್ನಾಟಕ ಸರ್ಕಾರದ ವಿರುದ್ಧವೂ ಆಕ್ರೋಶ ವ್ಯಕ್ತವಾಗಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಸುಪ್ರೀಂ ಆದೇಶ ನಂತರವೂ ಕರ್ನಾಟಕ ಕಾವೇರಿ ನೀರು ಬಿಡುತ್ತಿಲ್ಲ ಎಂದು ತಮಿಳುನಾಡು ರೈತರು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಮತ್ತು ಮೈತ್ರಿ ಪಕ್ಷಗಳು ಕರ್ನಾಟಕದಲ್ಲಿ ಪ್ರತಿಭಟನೆ ನಡೆಸುತ್ತಿರುವ ವಿಚಾರ ಪ್ರಸ್ತಾಪಿಸಿ ಬಂದ್‌ಗೆ ಕರೆ ನೀಡಲಾಗಿತ್ತು. ತಮಿಳುನಾಡು ಕೂಡ ಈ ಬಾರಿ ಬರದ ಬೇಗೆಯಲ್ಲಿ ನರಳಾಡುವ ಸ್ಥಿತಿಯಿದ್ದು, ಮಳೆ ಕೊರತೆಯಿಂದ ತಮಿಳುನಾಡು ಡ್ಯಾಂಗಳು ಒಣಗಿವೆ.

# ಅರಣ್ಯ ಸಚಿವರಿಂದ 10 ಲಕ್ಷ ರೂ. ಹೆಚ್ಚುವರಿ ಪರಿಹಾರ ಚೆಕ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಹಾಸನ

ಜಿಲ್ಲೆಯ ಆಲೂರು ಬಳಿ ಗಾಯಗೊಂಡಿದ್ದ ಆನೆ (ಭೀಮ)ಗೆ ಅರೆವಳಿಕೆ ಚುಚ್ಚುಮದ್ದು ನೀಡುವ ಕಾರ್ಯಾಚರಣೆ ವೇಳೆ ಆನೆ ದಾಳಿಗೆ ಒಳಗಾಗಿ ಮೃತಪಟ್ಟಿದ್ದ ಶಾರ್ಪ್ ಶೂಟರ್ ಎಚ್.ಎಚ್. ವೆಂಕಟೇಶ್ ಅವರ ಪುತ್ರ ಮೋಹಿತ್ ಮತ್ತು ಮಿಥುನ್ ಅವರಿಗೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅವರು 10ಲಕ್ಷ ರೂಪಾಯಿಗಳ (ಹೆಚ್ಚುವರಿ ಮೊತ್ತ)ದ ಪರಿಹಾರದ ಚೆಕ್ ನೀಡಿ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಸಚಿವರಾದ ಮಧು ಬಂಗಾರಪ್ಪ, ಮಾಂಕಾಳ ವೈದ್ಯ ಮತ್ತಿತರರು ಹಾಜರಿದ್ದರು. ನಿಯಮಾನುಸಾರ ಈಗಾಗಲೇ ಮೃತ ವೆಂಕಟೇಶ್ ಅವರು ಪತ್ನಿ ಜಿ.ಎಸ್. ಮಂಜುಳಾ ಅವರಿಗೆ ಅರಣ್ಯ ಸಚಿವರು ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದ ವೇಳೆ 15ಲಕ್ಷ ರೂ. ಚೆಕ್ ವಿತರಿಸಿದ್ದರು.

# ಕರಾಟೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗದುಗಿನ ಒಳಾಂಗಣ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ 7ನೇ ತರಗತಿಯ ವಿದ್ಯಾರ್ಥಿನಿ ಪಾವನಿ ಬಡಿಗೇರ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಈ ಸಾಧನೆಗೆ ತರಬೇತಿ ನೀಡಿದ ಕರಾಟೆ ತರಬೇತುದಾರರಾದ ಆನಂದ್ ವಾಲ್ಮೀಕಿ, ಅಶ್ವಿನಿ ಆನಂದ ಹಾಗೂ ವಿದ್ಯಾರ್ಥಿನಿಗೆ ಶಾಲೆಯ ಮುಖ್ಯೋಪಾಧ್ಯಾಯೆ



ಬಿ.ಜಿ ಶಿರ್ಸಿಯವರು ಶುಭ ಹಾರೈಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಧಮ್ಮಚಕ್ರ ಪರಿವರ್ತನಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯದ ದಲಿತ ಚಳುವಳಿಯ ಮುಂಚೂಣಿ ನಾಯಕ ಮಾವಳ್ಳಿ ಶಂಕರ ಅವರು ಅ.14ರಂದು ಬೆಳಿಗ್ಗೆ 10.30ಕ್ಕೆ ಗದುಗಿನ ತೋಂಟದಾರ್ಯ ಬಸವೇಶ್ವರ ಕಾಲೇಜು ಸಭಾಭವನದಲ್ಲಿ ಆಯೋಜಿಸಿರುವ 67ನೇ 'ಧಮ್ಮಚಕ್ರ ಪರಿವರ್ತನಾ ದಿನಾಚರಣೆ'ಗೆ ಆಗಮಿಸುತ್ತಿದ್ದಾರೆ.


ಮಾವಳ್ಳಿ ಶಂಕರರರಿಗೆ ಗದಗ ಜಿಲ್ಲೆಯ ಮಹಿಳಾ ಘಟಕದ ಸಂಚಾಲಕಿ ಡಾ. ಪೂಜಾ ಎಂ. ಬೇವೂರ ಹಾಗೂ ಮಹಿಳಾ ಪದಾಧಿಕಾರಿಗಳು ಘಟಕದಿಂದ ಸ್ವಾಗತ ಕೋರಿದ್ದಾರೆ.

## ಬಯೋಮೆಟ್ರಿಕ್ ಕ್ಲೋನಿಂಗ್ ಮೂಲಕ ವಂಚಿಸುವ ಹೊಸ ಜಾಲದ ಬಗ್ಗೆ ಎಚ್ಚರವಾಗಿರಿ

# ನಿಮ್ಮ ಹೆಬ್ಬೆರಳಿಗೊಂದು ಬೀಗ ಹಾಕಿ

ಸೈಬರ್ ವಂಚನೆಯ ಕ್ಷೇತ್ರದಲ್ಲಿ ಹೊಸ ವರಸೆ ಪ್ರಾರಂಭವಾಗಿದೆ. ಇತ್ತೀಚೆಗೆ ವರದಿಯಾದ ಬ್ಯಾಂಕ್ ಖಾತೆಗೆ ಕನ್ನ ಕೊರೆದ ಕೆಲ ಪ್ರಕರಣಗಳಲ್ಲಿ ಸಾಂಪ್ರದಾಯಿಕ ವಿಧಾನಗಣ ಬಳಕೆಯಾಗಿಲ್ಲ. ಬದಲಾಗಿ, ಆಧಾರ್ ಸಂಖ್ಯೆಗೆ ಜೋಡಣೆಯಾದ ಬಯೋಮೆಟ್ರಿಕ್ ಕೂಡ ಬಳಕೆಯಾಗಿದ್ದು ಹೊಸ ಆತಂಕಕ್ಕೆ ಕಾರಣವಾಗಿದೆ.

ಈ ಹಿಂದೆ, ಸೈಬರ್ ಕ್ರಿಮಿಗಳು ಮೊಬೈಲ್‌ಗೆ ಬರುವ ಒಟಿಪಿ, ಕ್ರೆಡಿಟ್/ಡೆಬಿಟ್ ಕಾರ್ಡ್‌ನ ಸಿವಿವಿ ಸಂಖ್ಯೆಗಳು ಮತ್ತು ಬ್ಯಾಂಕ್ ಖಾತೆಯ ವಿವರಗಳನ್ನು ಕದ್ದು ನಮ್ಮ ಖಾತೆಯಿಂದ ಹಣ ಎಗರಿಸುತ್ತಿದ್ದರು. ಆದರೆ, ಇತ್ತೀಚಿನ ಕೆಲ ಪ್ರಕರಣಗಳು ಇದರ ಹೊರತಾದ ಸಾಧ್ಯತೆಗಳನ್ನು ತೋರಿಸಿದೆ. ಯಾವ ಸಂದರ್ಭದಲ್ಲೂ ಬಹಿರಂಗಗೊಳಿಸಲಾಗದ ನಮ್ಮ ಹೆಬ್ಬೆರಳಿನ ಗುರುತನ್ನೇ ಕ್ಲೋನ್ ಮಾಡಿ ಇಲ್ಲಿ ಮೋಸವೆಸಗಲಾಗಿದೆ. ಅದು ಹೇಗೆ ಸಾಧ್ಯ ಎಂಬ ಸಂಶಯ ಮೂಡುವುದು ಸಹಜ. ಈ ವಂಚನೆಗಳು ಸಿಲಿಕಾನ್ ಫಿಂಗರ್‌ಪ್ರಿಂಟ್‌ಗಳು ಮತ್ತು ಅನಧಿಕೃತ ಬಯೋಮೆಟ್ರಿಕ್ ಸಾಧನಗಳ ಮೂಲಕ ವ್ಯಕ್ತಿಗಳ ಆಧಾರ್-ಸಂಯೋಜಿತ




ಬಯೋಮೆಟ್ರಿಕ್‌ಗಳನ್ನು ಕ್ಲೋನಿಂಗ್ ಮಾಡುತ್ತಿವೆ, ನಂತರ, ಅವರ ಬ್ಯಾಂಕ್ ಖಾತೆಗಳಿಂದ ಹಣವನ್ನು ಎಗರಿಸಲಾಗುತ್ತಿದೆ.

ಹರಿಯಾಣದ ಗುರುಗ್ರಾಮ್‌ನಲ್ಲಿ ಈ ವರ್ಷದ ಆರಂಭದಲ್ಲಿ ಇಂಥದೇ ಘಟನೆ ನಡೆದಿತ್ತು. ಅವರ ಅದೃಷ್ಟಕ್ಕೆ ಅಧಿಕಾರಿಗಳು ತಕ್ಷಣವೇ ಆಧಾರ್ ಅಪ್ಲಿಕೇಶನ್ ಮೂಲಕ ಬಯೋಮೆಟ್ರಿಕ್ ಡೇಟಾವನ್ನು ಲಾಕ್ ಮಾಡಿ, ಮುಂದಿನ ಹಾನಿಯನ್ನು ತಡೆದಿದ್ದರು. ಇಂತಹ ಹೊಸ ಜಾಲಕ್ಕೆ ನಮ್ಮ ಹೆಬ್ಬೆರಳ ಗುರುತು ಬಲಿಯಾಗಬಾರದೆಂದರೆ, ಕೆಲವು ಸುಲಭಸಾಧ್ಯ ಕ್ರಮಗಳನ್ನು ತೆಗೆದುಕೊಳ್ಳುವ ಅಗತ್ಯತೆಯಿದೆ. ಬಳಕೆದಾರರು ತಮ್ಮ ಬಯೋಮೆಟ್ರಿಕ್ ವಿವರಗಳನ್ನು ಲಾಕ್ ಮಾಡಲು ಮತ್ತು ಅಗತ್ಯವಿದ್ದಾಗ ಅನ್‌ಲಾಕ್ ಮಾಡಲು ಅಧಿಕೃತ UIDAI ವೆಬ್‌ಸೈಟ್ ಅಥವಾ M-ಆಧಾರ್ ಅಪ್ಲಿಕೇಶನ್ ಬಳಸಲು 2021ರಿಂದಲೇ ಅವಕಾಶ ಕಲ್ಪಿಸಲಾಗಿದೆ. ನೀವು ಹೀಗೆ ಆಧಾರ್ ಬಯೋಮೆಟ್ರಿಕ್ ಲಾಕ್ ಮಾಡಿಕೊಂಡರೆ, ಪ್ರತೀ ಬಾರಿ ಹೆಬ್ಬೆರಳಚ್ಚು ನೀಡುವಾಗಲೂ ಒಟಿಪಿ ನಮೂದಿಸಿಯೇ ಮುಂದುವರೆಯಬೇಕು.

ಈಗೀಗ ಸಿಮ್ ಕನೆಕ್ಷನ್ ಪಡೆಯುವಾಗ, ಬ್ಯಾಂಕ್‌ಗಳ ಕೆಲ ವ್ಯವಹಾರಗಳಲ್ಲಿ, ಸರ್ಕಾರಿ ಕಚೇರಿಗಳಲ್ಲಿ ಆಧಾರ್ ಸಂಖ್ಯೆಯೊಂದಿಗೆ ಹೆಚ್ಚಿನ ಸುರಕ್ಷತೆಗಾಗಿ ಬಯೋಮೆಟ್ರಿಕ್ ನೀಡಬೇಕಾಗಿದೆ. ಇಂತಹ ಸಂದರ್ಭಗಳಲ್ಲಿ ವಂಚಕರ ಜಾಲದಿಂದ ನಮ್ಮ ವೈಯಕ್ತಿಕ ಮಾಹಿತಿಯನ್ನು ರಕ್ಷಿಸಿಕೊಳ್ಳುವುದೂ ನಮ್ಮ ಕರ್ತವ್ಯವೇ. ಈ ಬಯೋಮೆಟ್ರಿಕ್ ಲಾಕಿಂಗ್/ಅನ್‌ಲಾಕಿಂಗ್ ವ್ಯವಸ್ಥೆ, ಆಧಾರ್ ಹೊಂದಿರುವವರು ತಮ್ಮ ಬಯೋಮೆಟ್ರಿಕ್‌ಗಳನ್ನು ಲಾಕ್ ಮಾಡಲು ಮತ್ತು ತಾತ್ಕಾಲಿಕವಾಗಿ ಅನ್‌ಲಾಕ್ ಮಾಡಲು ಒದಗಿಸಿರುವ ಸೇವೆ. ಲಾಕ್ ಮಾಡಲಾದ ಬಯೋಮೆಟ್ರಿಕ್ಸ್ ಆಧಾರ್ ಹೊಂದಿರುವವರು ತಮ್ಮ ಬಯೋಮೆಟ್ರಿಕ್‌ಗಳನ್ನು (ಬೆರಳಚ್ಚುಗಳು/ಐರಿಸ್) ದೃಢೀಕರಣಕ್ಕಾಗಿ ತಕ್ಷಣಕ್ಕೆ ಬಳಸಲು ಸಾಧ್ಯವಾಗುವುದಿಲ್ಲ. ಆಧಾರ್ ಲಾಕ್ ಮಾಡುವುದು ಮತ್ತು ಅನ್‌ಲಾಕ್ ಮಾಡುವುದು ಹೀಗೆ.

**ಹಂತ 1:** UIDAI ನ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ ಅಥವಾ https://uidai.gov.in/. ಲಿಂಕ್ ಮೂಲಕ ತೆರಳಿ.

**ಹಂತ 2:** ಆಧಾರ್ ಸೇವೆಗಳ ಅಡಿಯಲ್ಲಿ ಉಲ್ಲೇಖಿಸಲಾದ ಆಧಾರ್ ಲಾಕ್/ಅನ್‌ಲಾಕ್ ಸೇವೆಗೆ ಹೋಗಿ.

**ಹಂತ 3:** ಲಾಕ್/ಅನ್‌ಲಾಕ್ ಬಯೋಮೆಟ್ರಿಕ್ಸ್ ಆಯ್ಕೆಮಾಡಿ. ನೀವು ಇಲ್ಲಿ ನೇರ ಲಿಂಕ್ https://resident.uidai.gov.in/bio-lock. ಅನ್ನು ಕ್ಲಿಕ್ ಮಾಡಬಹುದು. UIDAI ಒದಗಿಸಿದ ಮಾಹಿತಿಯ ಪ್ರಕಾರ ನೀವು ಒಮ್ಮೆ ಬಯೋಮೆಟ್ರಿಕ್ ಲಾಕಿಂಗ್ ವ್ಯವಸ್ಥೆಯನ್ನು ಆ್ಯಕ್ಟಿವ್ ಮಾಡಿದರೆ, ಆಧಾರ್ ಹೊಂದಿರುವವರು ಅದನ್ನು ಅನ್‌ಲಾಕ್ ಮಾಡುವವರೆಗೆ (ಇದು ಒಂದು ಬಾರಿ ಮಾತ್ರ) ಅಥವಾ ಲಾಕಿಂಗ್ ವ್ಯವಸ್ಥೆಯನ್ನು ನಿಷ್ಕ್ರಿಯಗೊಳಿಸುವವರೆಗೆ ಬಯೋಮೆಟ್ರಿಕ್ ಸುರಕ್ಷಿತವಾಗಿರುತ್ತದೆ. ಆ ವ್ಯಕ್ತಿಯ ಒಪ್ಪಿಗೆ ಪಡೆಯದೇ ಬಯೋಮೆಟ್ರಿಕ್ ಬಳಸಲು ಸಾಧ್ಯವಾಗುವುದಿಲ್ಲ.

ಈ ಸೇವೆಯನ್ನು ಪಡೆಯಲು ಆಧಾರ್ ಸಂಖ್ಯೆಯೊಂದಿಗೆ ನೋಂದಾಯಿತ ಮೊಬೈಲ್ ಸಂಖ್ಯೆ ಅತ್ಯಗತ್ಯ. ಒಮ್ಮೆ ನೀವು ನಿಮ್ಮ ಬಯೋಮೆಟ್ರಿಕ್ ಡೇಟಾವನ್ನು ಲಾಕ್ ಮಾಡಿದ ನಂತರ ಬಯೋಮೆಟ್ರಿಕ್ ವಿಧಾನ (ಫಿಂಗರ್‌ಪ್ರಿಂಟ್/ಐರಿಸ್) ಬಳಸಿಕೊಂಡು ಯಾವುದೇ ದೃಢೀಕರಣ ಸೇವೆಗಳನ್ನು ಪಡೆಯಲು UID ಅನ್ನು ಬಳಸಿದರೆ ಬಯೋಮೆಟ್ರಿಕ್ಸ್ ಲಾಕ್ ಆಗಿರುವುದನ್ನು ಸೂಚಿಸುವ 'Error-330' ಕೋಡ್ ತೋರಿಸುತ್ತದೆ.

ಆ ಸಂದರ್ಭಕ್ಕೆ, ಆಧಾರ್ ವೆಬ್‌ಸೈಟ್ ಅಥವಾ ಒ-ಆಧಾರ್ ಅಪ್ಲಿಕೇಶನ್ ಮೂಲಕ ಲಾಗಿನ್ ಆಗಿ, ಒಟಿಪಿ ಪಡೆದು ಅನ್‌ಲಾಕ್ ಮಾಡಿದರೆ ಮಾತ್ರವೇ ಒಂದು ಬಾರಿ ಲಾಕ್ ಮಾಡಲಾದ ಬಯೋಮೆಟ್ರಿಕ್ಸ್ ಚಾಲ್ತಿಯಾಗುತ್ತದೆ.

ಇಂತಹ ನಕಲುಗಳು ಎಲ್ಲಿ ನಡೆದಿವೆ, ಕೊನೆಯ ಬಾರಿ ನಮ್ಮ ಹೆಬ್ಬೆರಳು ಗುರುತನ್ನು ಎಲ್ಲಿ ನೀಡಿದೆವು ಎಂಬುದನ್ನೆಲ್ಲ ನೆನಪಿಸಿಕೊಂಡು ಪತ್ತೆಹಚ್ಚುವ ರಗಳೆಗಿಂತ ಈ ವಿಧಾನ ಅತ್ಯಂತ ಸೂಕ್ತ. ಆಧಾರ್‌ನೊಂದಿಗೆ ಲಿಂಕ್ ಆಗಿರುವ ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆ ಈ ಎಲ್ಲ ಪ್ರಕ್ರಿಯೆಗಳಲ್ಲಿ ಅತ್ಯಗತ್ಯ ಎಂಬುದೂ ಗಮನಕ್ಕಿರಲಿ. ಇಂದೇ ನಿಮ್ಮ ಹೆಬ್ಬೆರಳಿಗೊಂದು ಬೀಗ ಹಾಕಿಬಿಡಿ.

# ಬಾಲ್ ಬ್ಯಾಡ್ಮಿಂಟನ್‌ನಲ್ಲಿ ವಲಯಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಶ್ರೀ ಸಿ.ಎಸ್ ಪಾಟೀಲ ಪ್ರೌಢಶಾಲೆಯ ವಿದ್ಯಾರ್ಥಿಗಳು ಬಾಲ್ ಬ್ಯಾಡ್ಮಿಂಟನ್‌ನಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ವಲಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ್ರ ಪಾಟೀಲ, ಆಡಳಿತ ಮಂಡಳಿಯ ಸದಸ್ಯರು, ಶಾಲೆಯ ಮುಖ್ಯೋಪಾಧ್ಯಾಯ ಎಮ್. ಆರ್ ನಾಯಿಕ ಹಾಗೂ ಸಿಬ್ಬಂದಿವರ್ಗದವರು ಜಯ ಗಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ತರಬೇತಿ ನೀಡಿದ ತಂಡದ ಮ್ಯಾನೇಜರ್ ಎಸ್.ಎಚ್ ಕೆಂಗುಡ್ಡಪ್ಪನವರಿಗೆ, ದೈಹಿಕ ಶಿಕ್ಷಣ ಶಿಕ್ಷಕರಾದ ಬಸವರಾಜ ದಂಡಿನ ಇವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಕುರ್ತಕೋಟಿಯಲ್ಲಿ 'ಮಾನಸಿಕ ಆರೋಗ್ಯ ದಿನಾಚರಣೆ'

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಾನಸಿಕ ಆರೋಗ್ಯ ವೃದ್ಧಿಯಿಂದ ನಮ್ಮ ಶರೀರದ ಆರೋಗ್ಯವೂ ವೃದ್ಧಿಯಾಗುತ್ತದೆ ಎಂದು ಕೆಎಚ್‌ಪಿಟಿ ತಾಲೂಕಾ ಆರೋಗ್ಯ ಸಂಯೋಜಕಿ ವಿದ್ಯಾ ಕಿತ್ತೂರ ಹೇಳಿದರು.

ಸಮೀಪದ ಕುರ್ತಕೋಟಿ ಗ್ರಾಮ ಪಂಚಾಯಿತಿಯ ಹೊಸಳ್ಳಿ ಗ್ರಾಮದ ಅಂಗನವಾಡಿಯಲ್ಲಿ ಆರೋಗ್ಯ ಇಲಾಖೆಯ ಸಹಯೋಗದಲ್ಲಿ 'ಮಾನಸಿಕ ಆರೋಗ್ಯ ದಿನಾಚರಣೆ' ಅಂಗವಾಗಿ ಆರೋಗ್ಯ ತಪಾಸಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮನುಷ್ಯನಿಗೆ ಒತ್ತಡಗಳು ಇರುವುದು ಸಹಜವಾಗಿದ್ದು, ನಮ್ಮ ಮಾನಸಿಕ ಸ್ಥಿತಿ ಆಯಾ



ಸಂದರ್ಭಕ್ಕೆ ಅನುಗುಣವಾಗಿ ಬದಲಾಗುತ್ತಿರಬೇಕು. ಇದರಿಂದ ದೈಹಿಕ ಆರೋಗ್ಯದೊಂದಿಗೆ ಮಾನಸಿಕ ಆರೋಗ್ಯವನ್ನು ವೃದ್ಧಿಸಿಕೊಳ್ಳಬೇಕು. ಆಗ ಮಾತ್ರ ಮನುಷ್ಯ ಉತ್ತಮ ಹಂತಕ್ಕೆ ತಲುಪಲು ಸಾಧ್ಯವಾಗುತ್ತದೆ ಎಂದರು.

ಮೈಲಾರಪ್ಪ ಬಿಳೆಯಲಿ ಮಾತನಾಡಿ, ಮಾನಸಿಕ ಕಾಯಿಲೆ ಎನ್ನುವುದು ಶಾಪವಲ್ಲ. ಅವರನ್ನು ಮುಖ್ಯವಾಹಿನಿಗೆ ತರುವ ಮೂಲಕ ಅವರ ಮಾನಸಿಕ ಆರೋಗ್ಯವನ್ನು ಸುಧಾರಿಸಬಹುದು ಎಂದರು.

ಆರೋಗ್ಯ ಅಧಿಕಾರಿ ಎಂ.ಐ ಮೋಹನಗೌಡ, ಆರೋಗ್ಯ ನಿರೀಕ್ಷಕ ಮೈಲಾರಪ್ಪ ಬಿಳೆಯಲಿ, ತಾಲೂಕು ಸಂಯೋಜಕಿ ವಿದ್ಯಾ ಕಿತ್ತೂರ, ಅಂಗನವಾಡಿ ಕಾರ್ಯಕರ್ತೆ ವಿಜಯಲಕ್ಷ್ಮಿ ಕೋರಿ, ಆಶಾ ಕಾರ್ಯಕರ್ತೆಯರಾದ ದೇವಕ್ಕಾ ಅಂಗಡಿ, ಮಂಜುಳಾ ಗಾರವಾಡ ಇದ್ದರು.

## ಸಂಕನೂರ ನರ್ಸಿಂಗ್ ಕಾಲೇಜಿನಲ್ಲಿ 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ'

# ಖಿನ್ನತೆಯ ಲಕ್ಷಣಗಳನ್ನು ನಿರ್ಲಕ್ಷಿಸಬೇಡಿ




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಕನೂರ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ ಪ್ರಕಾಶ ಸಂಕನೂರ ಮಾತನಾಡಿ, ಮಾನಸಿಕ ರೋಗಿಗಳು ಒತ್ತಡ ನಿರ್ವಹಣೆಗೆ ಮದ್ಯಸೇವನೆ ಹಾಗೂ ಇತರ ಚಟಗಳಿಗೆ ಒಳಗಾಗದೇ ಯೋಗ, ಧ್ಯಾನ, ಪ್ರಾಣಾಯಾಮ ಮಾಡುವ ಮೂಲಕ ಒತ್ತಡ ನಿರ್ವಹಿಸಲು ಸಾಧ್ಯ ಎಂದು ಕರೆ ನೀಡಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನಿಗೆ ದೈಹಿಕ ಆರೋಗ್ಯ ಎಷ್ಟು ಮುಖ್ಯವೋ ಮಾನಸಿಕ ಆರೋಗ್ಯವೂ ಅಷ್ಟೇ ಮುಖ್ಯ. ಬಾಹ್ಯ ದೇಹದ ಗಾಯಗಳು ಕಾಣುತ್ತವೆ, ಆದರೆ ತೀವ್ರವಾದ ಆಲೋಚನೆಯಿಂದ ಹಾಗೂ ಬೇರೆ ಬೇರೆ ಒತ್ತಡಗಳಿಂದ ಆಗುವ ಮಾನಸಿಕ ಖಿನ್ನತೆಗೆ ಒಳಗಾದ ರೋಗಿಗೆ ಒತ್ತಡ ನಿರ್ವಹಣೆ ಮಾಡಲು ಹಾಗೂ ರೋಗವನ್ನು ಗುಣಪಡಿಸಲು ನಿರ್ಲಕ್ಷಿಸದೇ ಚಿಕಿತ್ಸೆ ನೀಡಬೇಕು ಎಂದು ಬೆಳಗಾವಿ ವೈದ್ಯಕೀಯ ವಿಭಾಗದ ಸರ್ಕಾರಿ ನರ್ಸಿಂಗ್ ಕಾಲೇಜಿನ ಪ್ರಾಧ್ಯಾಪಕ ಡಾ. ಸುರೇಶ ಪಾಟೀಲ ಹೇಳಿದರು.

'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ' ಪ್ರಯುಕ್ತ ನಗರದ ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ 'ಮಾನಸಿಕ ರೋಗಿಗಳ ಮಾನವ ಹಕ್ಕುಗಳು' ಎಂಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಾನಸಿಕ ರೋಗಕ್ಕೆ ಒಳಗಾದ ಮೊಲದ ಹಂತದಲ್ಲಿಯೇ ಚಿಕಿತ್ಸೆಗೆ ಒಳಪಡಿಸಬೇಕು. ಇದರಿಂದ ರೋಗಿಯು ಬೇಗ ಗುಣಮುಖರಾಗಬಹುದು. ಪ್ರತಿ ವರ್ಷ ಅಕ್ಟೋಬರ್ 10ರಂದು ಒಂದು ಹೊಸ ಘೋಷವಾಕ್ಯದೊಂದಿಗೆ ಈ ದಿನವನ್ನು ಆಚರಿಸಲಾಗುತ್ತದೆ. ಈ ಬಾರಿ 'ಮಾನಸಿಕ ಆರೋಗ್ಯವು ಸಾರ್ವತ್ರಿಕ ಮಾನವ ಹಕ್ಕು' ಎಂಬ ಘೋಷವಾಕ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಕನೂರ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಮೀನಾಕ್ಷಿ ದೇವಾಂಗಮಠ, ಆಡಳಿತಾಧಿಕಾರಿಗಳಾದ ವಿನ್ಸೆಂಟ್ ಪಾಟೀಲ, ವೈದ್ಯಾಧಿಕಾರಿಯಾದ ಡಾ. ರಾಜೇಶ ಜನ್ನಾ, ಸೇರಿಂದಂತೆ ನರ್ಸಿಂಗ್ ಕಾಲೇಜಿನ ಪ್ರಾಧ್ಯಾಪಕರಾದ ಕವಿತಾ ಪವಾರ, ರಶ್ಮಿ ಪಾಟೀಲ, ರಾಧಾ, ಸರ್ವದೆ ಉಪಸ್ಥಿತರಿದ್ದರು. ನೀಹಾ ಹಣಗಿ ನಿರೂಪಿಸಿದರು. ವಿಜಯಲಕ್ಷ್ಮಿ ತಡೆದಮಠದ ಸ್ವಾಗತಿಸಿದರು. ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

# 'ಸೈಕಲ್ ಸವಾರಿ' ಚಲನಚಿತ್ರದ ಹಾಡು ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ಕಲಾರಂಗ' ಫಿಲ್ಮ್ ಸ್ಟುಡಿಯೋ ಮತ್ತು ಪ್ರೊಡಕ್ಷನ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ 'ಸೈಕಲ್ ಸವಾರಿ' ಕನ್ನಡ ಚಲನಚಿತ್ರದ ಹಾಡುಗಳ ಬಿಡುಗಡೆ ಸಮಾರಂಭ ಬೆಂಗಳೂರಿನಲ್ಲಿ ಜರುಗಿತು.

ನಿರ್ದೇಶಕ ದೇವು ಅಂಬಿಗ ಮಾತನಾಡಿ, ನವೆಂಬರ್ ತಿಂಗಳು ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ತೆರೆಗೆ ಬರುತ್ತಿದೆ. ಈ ಚಿತ್ರದಲ್ಲಿ ಬಸ್ಯಾ ಮತ್ತು ಮಧು ಪ್ರೀತಿಯ ಕಥೆಯ ಅಂತ್ಯ ದುರಂತವೋ ಸುಖಾಂತವೋ ಎಂಬುದನ್ನು ಪ್ರೇಕ್ಷಕರು ಚಿತ್ರಮಂದಿರಕ್ಕೆ ಬಂದು ತಿಳಿದುಕೊಳ್ಳಬೇಕು ಎಂದರು.

ಚಿತ್ರದಲ್ಲಿ ನಾಯಕ ನಟರಾಗಿ ದೇವು ಅಂಬಿಗ ನಟಿಸುವದರೊಂದಿಗೆ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ, ಜೊತೆಗೆ ನಿರ್ದೇಶನದ ಹೊಣೆ ಹೊತ್ತಿದ್ದಾರೆ. ನಾಯಕಿಯಾಗಿ ದೀಕ್ಷಾ ಭೀಸೆ, ಖಳನಾಯಕ ಪಾತ್ರದಲ್ಲಿ ಶಿವಾಜಿ ಮೆಟಗಾರ, ಭಾಗ್ಯದೊರೆ, ಲೋಕೇಶ, ಕಾವೇರಿ ಪಾಟೀಲ, ಆನಂದ ಕಾಂಬ್ಳೆ, ಅಶೋಕ ಭಜಂತ್ರಿ, ಕಲ್ಮೇಶ ಮತ್ತು ತಂಡ, ಕಲಾವಿದರಾದ ನಾಗರಾಜ ದೊಡಮನಿ, ರಾಮಚಂದ್ರ ಕಾಂಬ್ಳೆ, ಶಿವಲೀಲಾ, ನ್ಯಾಸಾ, ಕಾವ್ಯ, ರಂಜು, ಗೀತಾ ಮಾಲೂರ, ಗೌಡಪ್ಪಗೌಡ ಹುಲಿಕಲ್, ಜಾಹ್ನವಿ, ಜಯಮ್ಮಾ, ಮೋಹನ, ಲಕ್ಷ್ಮಣ, ಹಬೀಬ, ದೇವುಕುಮಾರ ಸಾತಲಗಾಂವ್ ಸಚೀನ್, ಮಾಂತು, ಶಿವಾನಂದ ಕಂಕಣವಾಡಿ, ಆರ್.ಜಿ ಮೇಡೆಗಾರ್ ಮುಂತಾದವರು ಅಭಿನಯಿಸಿದ್ದಾರೆ.

ಸಂಗೀತ-ಛಾಯಾಗ್ರಹಣ-ಕಲರ್ ಡಿಐ ರೋಹನ್ ದೇಸಾಯಿ, ಗೀತ ಸಂಯೋಜನೆ ವಿನೋದ ಹಿರೇಮಠ, ಮೇಕಪ್ ಪುಷ್ಪಾ ಗಂಗಣ್ಣವರ, ಶೃತಿ ಚೌದರಿ, ಸುಮಂತ್, ಕಲಾನಿರ್ದೇಶನ ಮಾಂತು ದಳವಾಯಿ, ಭೀಮರಾಯ, ಸಾಹಸ ದುರ್ಗೇಶ, ಕಾರಜೋಳ, ಸಹಾಯಕ ನಿರ್ದೇಶನ ಮಾಂತು ದಳವಾಯಿ, ತಿಮ್ಮಪ್ಪ ಗಂಜೊಳ್ಳಿ, ಸಚಿನ್ ಹಿಟ್ನಳ್ಳಿ, ಸಹ ನಿರ್ದೇಶನ ವಿನೋದ ರಾಠೋಡ, ಪಿಆರ್‌ಓ ನಾಗೇಂದ್ರ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಗಿ, ಪ್ರಚಾರ ಕಲೆ ವಿಶ್ವಪ್ರಕಾಶ ಮಾಳಗೊಂಡ ಅವರದಿದೆ. ಚಿತ್ರದ ನಿರ್ಮಾಪಕರು ಸುರೇಶ ಶಿವೂರ, ಸಹ ನಿರ್ಮಾಪಕರು ಲೋಕೇಶ ಸೌದಿ ಆಗಿದ್ದಾರೆ.

## ಮೆಣಸಿನಕಾಯಿ ಬೆಳೆ ಕ್ಷೇತ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಸುರೇಶ ಕುಂಬಾರ

# ಮೆಣಸಿನಕಾಯಿ ಕೀಟ, ರೋಗ ಬಾಧೆಗೆ ಸಲಹೆ



■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ತಾಲೂಕಿನಲ್ಲಿ ಸುಮಾರು 5205 ಹೇಕ್ಟರ್ ಕ್ಷೇತ್ರದಲ್ಲಿ ಮೆಣಸಿನಕಾಯಿ ಬೆಳೆದಿದ್ದು, ಮಳೆಯ ಅಭಾವ ಹಾಗೂ ತೇವಾಂಶದ ಕೊರತೆಯಿಂದ ಕೀಟ ಬಾಧೆ ಮತ್ತು ರೋಗಗಳು ತಗುಲಿ ಬೆಳೆ ನಷ್ಟವಾಗುತ್ತಿದೆ.ಈ ಹಿನ್ನೆಲೆಯಲ್ಲಿ ರೈತರ ಕ್ಷೇತ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ಕುಂಬಾರ ಅವರು ರೈತರಿಗೆ ಸಲಹೆಗಳನ್ನು ನೀಡಿದರು.

ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಮಾಡಳ್ಳಿ, ಯಳವತ್ತಿ ಗ್ರಾಮಗಳ ಮೆಣಸಿನಕಾಯಿ ಕ್ಷೇತ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಪ್ರಮುಖ ರಸ ಹೀರುವ ಕೀಟಗಳಾದ ಥ್ರಿಪ್ಸ್ ನುಸಿ, ಸಸ್ಯ ಹೇನು ಕಾಯಿಕೋಶ ಮುಂತಾದವು ಪ್ರಮುಖ ರೋಗಗಳಾದ ಎಲೆ ಮುಟುರು ರೋಗ, ಎಲೆ ಚುಕ್ಕಿ ರೋಗ, ಕಾಯಿ ಕೊಳೆ ರೋಗ, ಬೇರು ಕೊಳೆ ರೋಗ ಮುಂತಾದ ರೋಗಗಳು ಕಂಡು ಬಂದವು. ತೀವ್ರ ತರಹದ ತೇವಾಂಶದ ಕೊರತೆ, ಸರಿಯಾದ ವೇಳೆಗೆ ಮಳೆಯಾಗದಿರುವುದು ಇದಕ್ಕೆ ಪ್ರಮುಖ ಕಾರಣವಾಗಿದೆ ಎಂದು ರೈತರಿಗೆ ವಿವರಿಸಿದರು.

ಮೆಣಸಿನಕಾಯಿ ಬೆಳೆದ ರೈತರು ಇವುಗಳ ನಿರ್ವಹಣೆಗಾಗಿ ಮುಂಜಾಗ್ರತಾ ಕ್ರಮ ಕೈಗೊಳ್ಳುವುದು ಅವಶ್ಯಕವಾಗಿದೆ. 3 ಗ್ರಾಂ ಡೈಯಾಮಿಥೋಕ್ಸಾಮ್ (ಅಕ್ಟಾರಾ), 10 ಗ್ರಾಂ ಪೊಾಸಿಸ್, 20 ಮಿಲೀ ಬೇವಿನ ಎಣ್ಣೆಯನ್ನು 10 ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸುವುದು. ಒಂದು ವಾರದ ನಂತರ 15 ಮಿಲೀ ಬೆನೆಮಿಯಾ 10 ಗ್ರಾಂ ಸ್ಟ್ರೆರೋಮೆಸಿಪಿನ್ (ಓಜಿರಾನ್), 20 ಮಿಲೀ ಬೇವಿನ ಎಣ್ಣೆಯೊಂದಿಗೆ 10 ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸುವುದು. 4, 5 ದಿನಗಳ ನಂತರ 25 ಮಿಲೀ ಡಿಕೋಫಾಲ್ 10 ಗ್ರಾಂ ಕಾರ್ಬನ್‌ಡೈಜಿಂ, 20 ಮಿಲೀ ಬೇವಿನ ಎಣ್ಣೆಯೊಂದಿಗೆ 10 ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸುವುದು.

ರಸ ಹೀರುವ ಕೀಟಗಳು, ಮುಟುಗು ರೋಗ ಕಂಡುಬಂದಲ್ಲಿ 3 ಮಿಲೀ ಇಮಿಡಾಕ್ಲೋಪ್ರಿಡ್, 30 ಗ್ರಾಂ ನೀರಿನಲ್ಲಿ ಕರಗುವ ಗಂಧಕ, 20 ಮಿಲೀ ಬೇವಿನ ಎಣ್ಣೆಯೊಂದಿಗೆ 10 ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸುವುದು. ಪೋಷಕಾಂಶಗಳ ಕೊರತೆ ಇರುವುದರಿಂದ ತಕ್ಷಣವೇ 50 ಗ್ರಾಂ ಲಘುಕೋಶಗಳ ಮಿಶ್ರಣ ಅಥವಾ ತರಕಾರಿ ಸ್ಪೆಶಲ್‌ನ್ನು 10 ಲೀಟರ್ ನೀರಿನಲ್ಲಿ ಬೆರೆಸಿ 2-3 ಸಾರೆ, 15 ದಿನಗಳ ನಂತರದಲ್ಲಿ ಸಿಂಪಡಿಸಬೇಕು ಎಂದು ರೈತರಿಗೆ ಸಲಹೆಗಳನ್ನು ನೀಡಿದ್ದು, ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಸುರೇಶ ಕುಂಬಾರ ಅವರು ತಿಳಿಸಿದ್ದಾರೆ.

# ಹೈದರಾಬಾದ್‌ನಲ್ಲಿ ಬೆಟ್ಟಿಂಗ್ ದಂಧೆ, ಪೊಲೀಸರ ಹದ್ದಿನ ಕಣ್ಣು

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ತೆಲಂಗಾಣದಲ್ಲಿ ವಿಧಾನಸಭೆ ಚುನಾವಣೆ ಸಮೀಪಿಸುತ್ತಿದೆ. ಮತ್ತೊಂದೆಡೆ ವಿಶ್ವಕಪ್ ಕ್ರಿಕೆಟ್ ನಡೆಯುತ್ತಿದೆ.

ಈ ಎರಡು ಬೆಳವಣಿಗೆಗಳ ಮೇಲೆ ಜನರ ಬೆಟ್ಟಿಂಗ್ ದಂಧೆ ಜೋರಾಗಿದೆ.

ಹವಾಲಾ ದಂಧೆಕೋರರು ಮತ್ತು ದಲ್ಲಾಳಿಗಳ ಚಲನವಲನಗಳ ಮೇಲೆ ಎಚ್ಚರಿಕೆ ವಹಿಸಿರುವ ಪೊಲೀಸರು, ವಾರದಲ್ಲಿ ಸುಮಾರು 8 ಕೋಟಿ ರೂ. ಹಣ ವಶಪಡಿಸಿಕೊಂಡಿದ್ದಾರೆ.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

**E-mail: vijayasakshidaily@gmail.com**

**ಮೊ : 9019256545**

# ಎಸ್.ಸಿ/ಎಸ್.ಟಿ ಕಾಲೋನಿಗೆ ಸಿಸಿ ಕ್ಯಾಮೆರಾ ಅಳವಡಿಸಿ

▸▸ ಮೊದಲನೇ ಪುಟದಿಂದ

ಎಂದರು. ಸಭೆಯಲ್ಲಿ ಸಮಿತಿಯ ಸದಸ್ಯರಾದ ಮೈಲಾರಪ್ಪ ಕಲಕೇರಿ, ಜಾನು ಲಮಾಣಿ, ಎಸ್ ಎನ್ ಬಳ್ಳಾರಿ ಸೇರಿದಂತೆ ಇತರ ಸದಸ್ಯರು ಶಿರಹಟ್ಟಿ ತಾಲೂಕಿನ ವಾಲ್ಮೀಕಿ ಭವನದ ಪರಿಶೀಲನೆ, ಬಾಗೇವಾಡಿ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಭವನದ ಪರಿಶೀಲನೆ, ರೋಣ ತಾಲೂಕಿನಲ್ಲಿ ಅಂಬೇಡ್ಕರ್ ಭವನ ಹಾಗೂ ಹುಲ್ಲೂರು ಗ್ರಾಮದಲ್ಲಿ ಚೆಕ್ ಡ್ಯಾಂ ಪರಿಶೀಲನೆ ಸೇರಿದಂತೆ ದೌರ್ಜನ್ಯ ನಿಯಂತ್ರಣ ಕುರಿತು ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಗದಗ-ಬೆಟಗೇರಿ ಪೌರಾಯುಕ್ತ ಗಂಗಪ್ಪ ಎಂ, ತಾಲೂಕಾ ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಅಬಕಾರಿ ಇಲಾಖೆ, ಸ್ತ್ರೀ ಶಕ್ತಿ ಸಂಘದವರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ನಿಗದಿಪಡಿಸಿದ ಆರ್ಥಿಕ, ಭೌತಿಕ ಗುರಿ ಸಾಧನೆಗೆ ಕಾರ್ಯಪ್ರವೃತ್ತರಾಗಿ

▸▸ ಮೊದಲನೇ ಪುಟದಿಂದ

ಪ್ರಗತಿಯ ಅಂಕಿ ಅಂಶಗಳನ್ನು ಸಭೆಯ ಗಮನಕ್ಕೆ ತಂದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ , ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಗಂಗಪ್ಪ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟೆಮನಿ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಿಬ್ಬಂದಿಗಳು ಹಾಜರಿದ್ದರು.

# ಪಶು ಆಸ್ಪತ್ರೆಯ ಅಭಿವೃದ್ಧಿಗೆ ವಿಶೇಷ ಪ್ರಯತ್ನ

▸▸ ಮೊದಲನೇ ಪುಟದಿಂದ

ಚಿಕಿತ್ಸೆಗಾಗಿ ಅವಶ್ಯವಿರುವ ಸೌಲಭ್ಯಗಳನ್ನು ಒದಗಿಸುವಂತೆ ಇಲಾಖೆಯ ಸಚಿವರಿಗೆ ಮನವಿ ಮಾಡಿದ್ದೇನೆ. ಪಶು ಆಸ್ಪತ್ರೆಯ ಅಭಿವೃದ್ಧಿಯೊಂದಿಗೆ ಜಾನುವಾರುಗಳಿಗೆ ತೊಂದರೆಯಾಗದಂತೆ ಕ್ರಮ ವಹಿಸುವದಾಗಿ ನುಡಿದ ಅವರು, ಇದೀಗ ಮಂಜೂರಾದ ಕಟ್ಟಡ ಕಾಮಗಾರಿಯನ್ನು ಗುತ್ತಿಗೆದಾರರು ಗುಣಮಟ್ಟದಿಂದ ನಿರ್ಮಿಸಿ, ಕಳಪೆಯಾಗಿರುವದು ಕಂಡು ಬಂದರೆ ಕ್ರಮಕ್ಕೆ ಶಿಫಾರಸು ಮಾಡುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಪಶು ವೈದ್ಯಾದಿಕಾರಿ ಡಾ.ನೀಲಕಂಠ ಹವಳದ, ಡಾ. ವೇದಾವತಿ, ನಗರ ಬಿಜೆಪಿ ಅಧ್ಯಕ್ಷ ದುಂಡೇಶ ಕೊಟಗಿ, ಶಿರಹಟ್ಟಿ ಮಂಡಳ ಬಿಜೆಪಿ ಅಧ್ಯಕ್ಷ ಫಕ್ಕೀರೇಶ ರಟ್ಟೀಹಳ್ಳಿ, ಗಂಗಾಧರ ಮೆಣಸಿನಕಾಯಿ, ನಿಂಗಪ್ಪ ಬನ್ನಿ, ರಮೇಶ ಹಾಳದೋಟದ, ಸಂಗಮೇಶ ಬೆಳವಲಕೊಪ್ಪ, ನವೀನ ಬೆಳ್ಳಟ್ಟಿ, ಎಂ.ಆರ್ ಪಾಟೀಲ, ಶಕ್ತಿ ಕತ್ತಿ, ವಿಶಾಲ ಬಟಗುರ್ಕಿ, ಟಾಕಪ್ಪ ಸಾತಪುತೆ, ಬಸವರಾಜ ಕಲ್ಲೂರ, ಅನಿಲ ಮುಳಗುಂದ, ಬಸವರಾಜ ಚಕ್ರಸಾಲಿ, ಗಿರೀಶ ಚೌರಡ್ಡಿ, ಉಳವೇಶಗೌಡ ಪಾಟೀಲ, ಅಭಯ ಜೈನ್, ಈರಣ್ಣ ಅಕ್ಕೂರ, ಗುತ್ತಿಗೆದಾರ ನಾಗಲಿಂಗಸ್ವಾಮಿ, ಇಂಜಿನಿಯರ ಮಾಲತೇಶ ಹೊಸಗೌಡ್ರ ಸೇರಿದಂತೆ ಪಶು ಆಸ್ಪತ್ರೆ ಸಿಬ್ಬಂದಿಗಳು ಇದ್ದರು.

# ನಿಧನ ವಾರ್ತೆ

## ಪೆಂಡಕೂರ ನಾರಾಯಣಪ್ಪ



**ಹರಪನಹಳ್ಳಿ:** ಪಟ್ಟಣದ ಉದ್ಯಮಿ ಪೆಂಡಕೂರ ನಾರಾಯಣಪ್ಪ (99) ಮಂಗಳವಾರ ರಾತ್ರಿ ನಿಧನರಾಗಿದ್ದಾರೆ. ಮೃತರು ಪುತ್ರ ಡಾ. ಪಿ.ಅನಂತಶೆಟ್ಟಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ತೆಗ್ಗಿನಮಠ ಪೀಠಾಧ್ಯಕ್ಷ ಶ್ರೀ ವರಸದ್ಯೋಜಾತ ಮಹಾಸ್ವಾಮಿಗಳು, ಕಾಂಗ್ರೆಸ್ ಮುಖಂಡ ಸಿ.ಚಂದ್ರಶೇಖರ, ಪುರಸಭೆ ಮಾಜಿ ಅಧ್ಯಕ್ಷ ಎಂ.ರಾಜಶೇಖರ ಹಾಗೂ ಇತರರು ಸಂತಾಪ ಸೂಚಿಸಿದ್ದಾರೆ.

‘ಅಂಚೆ ಜನಸಂಪರ್ಕ ಅಭಿಯಾನ’ದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅಭಿಮತ

# ಅಂಚೆ ಇಲಾಖೆಯ ಮೇಲೆ ಅದಮ್ಯ ವಿಶ್ವಾಸ




**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಸ್ತುತ ಆಧುನಿಕ ದಿನಮಾನಗಳಲ್ಲಿ ಅಂಚೆ ಇಲಾಖೆ ವಿಶ್ವದಲ್ಲಿಯೇ ಉತ್ತಮ ಸಂಪರ್ಕ ಜಾಲವನ್ನು ಹೊಂದಿದ್ದು, ಜನರ ವಿಶ್ವಾಸವನ್ನು ಗಳಿಸಿದ ಇಲಾಖೆಯಾಗಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಚನ್ನಮ್ಮನವನ ಕಲ್ಯಾಣ ಮಂಟಪದಲ್ಲಿ ಅಂಚೆ ಇಲಾಖೆ ಗದಗ ವಿಭಾಗ, ಗದಗ ಉಪವಿಭಾಗ ಇವರ ವತಿಯಿಂದ ಆಯೋಜಿಸಿದ್ದ ‘ಅಂಚೆ ಜನಸಂಪರ್ಕ ಅಭಿಯಾನ’ ಉದ್ಘಾಟಿಸಿ ಮಾತನಾಡಿದರು.

ಅಂಚೆ ಅಧಿಕಾರಗಳ ಸೇವೆ ದೊಡ್ಡದು. ದಕ್ಷತೆ, ಗೌರವಯುತವಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ. ಭ್ರಷ್ಟಾಚಾರ ರಹಿತ ವ್ಯವಸ್ಥೆ ಅಂಚೆ ಇಲಾಖೆಯಲ್ಲಿ ಮಾತ್ರವೇ ಇದೆ. ಅಂಚೆ ಇಲಾಖೆಯ ಕಾರ್ಯ ಸವಾಜಮುಖಿಯಾದದ್ದು. ಸ್ಪರ್ಧಾತ್ಮಕ ಯುಗದ ಪೈಪೋಟಿಯಲ್ಲಿ ಅಂತರ್ಜಾಲ ತಂತ್ರಜ್ಞಾನವನ್ನು ಬಳಸಿಕೊಂಡು ಜನರಿಗೆ ಉತ್ತಮ ರೀತಿಯಲ್ಲಿ ಸೌಲಭ್ಯಗಳನ್ನು ನೀಡುತ್ತಿದ್ದು, ಅದರಲ್ಲೂ ಅಂದಿನ ಯಾವುದೇ ಸೌಲಭ್ಯ ಇರದ ದಿನಗಳಲ್ಲಿ ಅಂಚೆಯಣ್ಣ ನೀಡುತ್ತಿದ್ದ ಸೇವೆ ಅತ್ಯಂತ ಪ್ರಾಮಾಣಿಕ ಸೇವೆಯಾಗಿದೆ. ಹೀಗಾಗಿ, ನೂರಾರು ವರ್ಷಗಳು ಕಳೆದರೂ ಅದರ ಮೇಲಿನ ವಿಶ್ವಾಸ ಕಡಿಮೆಯಾಗಿಲ್ಲ. ಇದೀಗ ಸಾಕಷ್ಟು ಯೋಜನೆಗಳನ್ನು ತಂದಿರುವ ಅಂಚೆ ಇಲಾಖೆಯಿಂದ ಪ್ರಯೋಜನ ಪಡೆದುಕೊಳ್ಳಬೇಕೆಂದು ಕರೆನೀಡಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಅಂಚೆ ವಿಭಾಗದ ಅಂಚೆ ಅಧೀಕ್ಷಕ ನಿಂಗನಗೌಡ ಭಂಗಿಗೌಡ್ರ ಮಾತನಾಡಿ, ಅಂಚೆ ಇಲಾಖೆ ಸಿಬ್ಬಂದಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿದ್ದು, ಆದರ್ಶ, ನಯ-ವಿನಯದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ಸೌಲಭ್ಯಗಳಲ್ಲಿಯು ಪ್ರಸ್ತುತ ದಿನಮಾನಕ್ಕೆ ತಕ್ಕಂತೆ ಬದಲಾವಣೆ ಅವಶ್ಯವಾಗಿದೆ. ಅಂಚೆ ಕಚೇರಿಗೆ 250 ವರ್ಷಗಳ ಇತಿಹಾಸವಿದೆ, ಇಂದಿಗೂ ಅಷ್ಟೇ ವಿಶ್ವಾಸಾಹವಾಗಿದೆ ಎಂದರು.

ತಹಸೀಲ್ದಾರ ಕೆ.ಆನಂದಶೀಲ್ ಮಾತನಾಡಿದರು. ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾಧವ ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರದಲ್ಲಿ ಅಂಚೆ ಇಲಾಖೆ ಈ ಮೊದಲು ಸಂಪರ್ಕ ಸಾಧನೆಗೆ ಮಾತ್ರ ಮೀಸಲಾಗಿತ್ತು. ಇಲಾಖೆ ಇದೀಗ ನೂರಕ್ಕೂ ಹೆಚ್ಚು ಸೇವೆಗಳನ್ನು ಗ್ರಾಹಕರಿಗೆ ಒದಗಿಸುವ ಮೂಲಕ ಪ್ರಮುಖ ಸೇತುವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಿ.ಜಿ ಹಿರೇಮಠ, ಬಿ.ಎಸ್ ಬಾಳೇಶ್ವರಮಠ, ಶಕುಂತಲಾ ಹೊರಟ್ಟಿ, ಆಯ್‌ಪಿಪಿಬಿ ವ್ಯವಸ್ಥಾಪಕ ಪಿ.ಆನಂದಸಾಗರ, ಪಟ್ಟಣದ ಅಂಚೆ ಪಾಲಕ ದೊಡ್ಡಪ್ಪ ಇಟಗಿ, ನಿವೃತ್ತ ಅಂಚೆ ಪಾಲಕ ಬಸವರಾಜ ಬಳ್ಳೊಳ್ಳಿ ಸೇರಿದಂತೆ ಅನೇಕರಿದ್ದರು.

ಅಂಚೆ ಕಚೇರಿ ಸಂಪರ್ಕ ಅಭಿಯಾನದ ಅಂಗವಾಗಿ ಸ್ಥಳೀಯ ಪುರಸಭೆ ಪೌರಕಾರ್ಮಿಕರನ್ನು ಹಾಗೂ ಅಂಚೆ ಇಲಾಖೆಯಲ್ಲಿ ಉತ್ತಮ ಸಾಧನೆ ಮಾಡಿದ ಇಲಾಖೆ ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು. ದೊಡ್ಡಪ್ಪ ಇಟಗಿ ಸ್ವಾಗತಿಸಿದರು. ಈಶ್ವರ ಮೆಡ್ಲೇರಿ ನಿರೂಪಿಸಿದರು.

> ಶಾಲಾ-ಕಾಲೇಜು ಮಕ್ಕಳಿಗೆ ಅಂಚೆ ಕಛೇರಿಯ ಸೇವೆ ಇಂದು ತುಂಬಾ ಸಹಾಯಕವಾಗಿದೆ. ಇದೀಗ ಠೇವಣಿ, ವಿಮೆ, ಉಳಿತಾಯ ಖಾತೆ ಇತ್ಯಾದಿಗಳ ಸೌಲಭ್ಯವಿದ್ದು, ಫೋನ್ ಮೂಲಕ ತಿಳಿಸಿದರೆ ಖಾತೆಯಲ್ಲಿನ ಹಣವನ್ನು ಮನೆಗೆ ತಲುಪಿಸುವ ಯೋಜನೆಯೂ ಇದೆ. ಅಂಚೆ ಇಲಾಖೆಯಲ್ಲಿರುವ ಹೊಸ ಹೊಸ ಯೋಜನೆಗಳ ಬಗ್ಗೆ ಜನರು ತಿಳಿದುಕೊಂಡು ಇಲಾಖೆಯೊಂದಿಗೆ ಕೈಜೋಡಿಸಿ.
>
> **– ನಿಂಗನಗೌಡ ಭಂಗಿಗೌಡ್ರ.**
> ಅಂಚೆ ಅಧೀಕ್ಷಕರು, ಗದಗ ಅಂಚೆ ವಿಭಾಗ.

# ನರೇಗಲ್ಲ ಆಸ್ಪತ್ರೆಗೆ ಬೇಕು ಇನ್ನೊಬ್ಬ ವೈದ್ಯಾಧಿಕಾರಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಓರ್ವ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಪ್ರಾಥಮಿಕ ಆರೋಗ್ಯ ಕೇಂದ್ರ ಅಂದಾಜು 30 ಸಾವಿರ ಜನರ ಆರೋಗ್ಯ ರಕ್ಷಣೆಯ ಜವಾಬ್ದಾರಿ ಹೊತ್ತಿದ್ದು, ಸುತ್ತಲಿನ ಹತ್ತು ಹಳ್ಳಿಗಳ ಜನರ ಆರೋಗ್ಯ ರಕ್ಷಣೆಗೆ ಈ ಪ್ರಾಥಮಿಕ ಆರೋಗ್ಯ ಕೇಂದ್ರವೇ ಆಧಾರವಾಗಿದೆ.

ಆದರೆ ಇಲ್ಲಿ ಈಗಿರುವ ವೈದ್ಯರ ಕಾರ್ಯಕ್ಷಮತೆಗೆ ಈ ಆರೋಗ್ಯ ಕೇಂದ್ರದ ವ್ಯಾಪ್ತಿಯನ್ನು ಮೀರಿ ಹೆಚ್ಚಿನ ಹೊರ ರೋಗಿಗಳು ಬಂದು ಚಿಕಿತ್ಸೆ ಪಡೆಯುತ್ತಿದ್ದಾರೆ. 3 ಜನ ಸ್ಟಾಫ್ ನರ್ಸ್, ಇಬ್ಬರು ಡಿ ದರ್ಜೆ ನೌಕರರು, ಒಬ್ಬರು ಪ್ರಥಮ ದರ್ಜೆ ಸಹಾಯಕರು, ಇನ್ನೊಬ್ಬರು ದ್ವಿತೀಯ ದರ್ಜೆ ಸಹಾಯಕರು ಹೀಗೆ ಎಲ್ಲ ಸಿಬ್ಬಂದಿಯವರೂ ಇದ್ದಾರೆ.

ಆಸ್ಪತ್ರೆಗೆ ಬರುವ ರೋಗಿಗಳಿಗೆ ಉತ್ತಮ ಚಿಕಿತ್ಸೆಯೂ ದೊರಕುತ್ತಿದೆ. ಈಗ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು ಬೆಳಗ್ಗೆಯಿಂದ ಸಂಜೆಯವರೆಗೂ ತಮ್ಮ ಕಾರ್ಯ ನಿರ್ವಹಿಸಿ ತೆರಳುತ್ತಾರೆ. ನಂತರದ ಕಾರ್ಯ ನಿರ್ವಹಿಸಲು ಒಬ್ಬ ವೈದ್ಯಾಧಿಕಾರಿ ಬೇಕು ಎನ್ನುವುದು ಇಲ್ಲಿನ ಸಾರ್ವಜನಿಕರ ಅಳಲಾಗಿದೆ.

ಈ ಆರೋಗ್ಯ ಕೇಂದ್ರವು 24*7 ಕಾರ್ಯ ನಿರ್ವಹಿಸುವ ಕೇಂದ್ರವಾಗಿರುವುದರಿಂದ ಅವೇಳೆಯಲ್ಲಿ ಯಾರಾದರೂ ಹೆರಿಗೆಗೆಂದು ಬಂದರೆ, ಏನಾದರೂ ಅಪಘಾತ ಸಂಭವಿಸಿ ಚಿಕಿತ್ಸೆಗೆಂದು ಬಂದರೆ, ಮತ್ತೇನಾದರೂ ಆರೋಗ್ಯದ ಸಮಸ್ಯೆಗಳಾದರೆ ಚಿಕಿತ್ಸೆ ಕಷ್ಟವಾಗುತ್ತಿದೆ.

ಹೀಗಾಗಿ, ಮೇಲಾಧಿಕಾರಿಗಳು ಗಮನ ಹರಿಸಿ ತಕ್ಷಣ ಇನ್ನೋರ್ವ ವೈದ್ಯಾಧಿಕಾರಿಯನ್ನು ನರೇಗಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ನೇಮಿಸಬೇಕೆಂಬುದು ಇಲ್ಲಿನ ಸಾರ್ವಜನಿಕರ ಬೇಡಿಕೆಯಾಗಿದೆ.

# ಶಿವಾನಂದಗೆ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ ಪ್ರದಾನ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ತೋಟಗಂಟಿಯ ಉಪನ್ಯಾಸಕ ಶಿವಾನಂದ ಗೋಗೇರಿಯವರು ಈ ಸಾಲಿನ ‘ಮಹಾತ್ಮ ಗಾಂಧಿ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ’ಗೆ ಭಾಜನರಾಗಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಗೆ ಅವರಿಗೆ ಈ ಪ್ರಶಸ್ತಿಯನ್ನು ನೀಡಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಪ್ರಶಸ್ತಿ ಪ್ರದಾನ ಸಮಾರಂಭವು ಧಾರವಾಡದಲ್ಲಿ ಈಚೆಗೆ ಜರುಗಿತು. ಧಾರವಾಡದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆದ ವರ್ಣರಂಜಿತ ಸಮಾರಂಭದಲ್ಲಿ ಶಿವಾನಂದ ಅವರಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಜನಸ್ನೇಹಿ ಫೌಂಡೇಷನ್ ಹಾಗೂ ಶ್ರೀನಿಧಿ ಫೌಂಡೇಷನ್‌ಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಸಮಾರಂಭದಲ್ಲಿ ಗೌರವಾಧ್ಯಕ್ಷ ಡಾ. ಮಂಜುನಾಥ ಎನ್.ಶಿವಕ್ಕನವರ, ಅಧ್ಯಕ್ಷ ಡಾ. ಎಫ್.ಕೆ ನಿಗದಿ ಮತ್ತು ಕಾರ್ಯದರ್ಶಿ ಜ್ಯೋತಿ ಶಿವಕ್ಕನವರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಪ್ರಧಾನಿಗಳ ಮಧ್ಯ ಪ್ರವೇಶದಿಂದ ಸಮಸ್ಯೆ ಬಗೆಹರಿಯದು: ಎಂಪಿ ಸುಮಲತಾ



**■ ವಿಜಯಸಾಕ್ಷಿ ಸುದ್ದಿ, ಮಂಡ್ಯ**

ಸಂಕಷ್ಟ ಸೂತ್ರ ರಚನೆಯಿಂದ ಮಾತ್ರ ಕಾವೇರಿ ಜಲ ವಿವಾದಕ್ಕೆ ಶಾಶ್ವತ ಪರಿಹಾರ ಸಾಧ್ಯ ಎಂದು ಸಂಸದೆ ಸುಮಲತಾ ಸ್ಪಷ್ಟಪಡಿಸಿದ್ದಾರೆ.

ಪಟ್ಟಣದಲ್ಲಿರುವ ಮಾಜಿ ಸಚಿವ ಕೆ.ಸಿ ನಾರಾಯಣಗೌಡರ ನಿವಾಸದಲ್ಲಿ ಮಾಜಿ ಸಚಿವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾವೇರಿ ವಿಚಾರದಲ್ಲಿ ಜಿಲ್ಲೆಯ ಜನ ಭಾವೋದ್ವೇಗಕ್ಕೆ ಒಳಗಾಗಿ ಮಾತನಾಡುತ್ತಿದ್ದಾರೆ. ಒಬ್ಬ ಸಂಸದೆಯಾಗಿ ನಾನು ಆ ರೀತಿ ಮಾತನಾಡಲಾಗುವುದಿಲ್ಲ. ಜನರನ್ನು ಮೆಚ್ಚಿಸಲು ಒಂದು ಹನಿ ನೀರನ್ನು ಬಿಡುವುದಿಲ್ಲ ಎಂದು ಹೇಳುವುದು ಸುಲಭ. ಆದರೆ ಅದರ ಅನುಸರಣೆ ಕಷ್ಟ ಸಾಧ್ಯ.

ಕಾವೇರಿ ವಿಚಾರದಲ್ಲಿ ಪ್ರಧಾನ ಮತ್ರಿಗಳು ಮಧ್ಯ ಪ್ರವೇಶಿಸಬೇಕು ಎಂದು ಕೆಲವರು ಹೇಳುತ್ತಿದ್ದಾರೆ. ಪ್ರಧಾನಿಗಳ ಮಧ್ಯ ಪ್ರವೇಶದಿಂದ ಕಾವೇರಿ ಸಮಸ್ಯೆ ಪರಿಹಾರವಾಗುವುದಿದ್ದರೆ ಅದು ಎಂದಿಗೋ ಸಾಧ್ಯವಾಗುತ್ತಿತ್ತು.

ಈ ಹಿಂದೆ ಮನಮೋಹನ್ ಸಿಂಗ್ ದೇಶದ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಅಂದು ಕೇಂದ್ರ ಸಚಿವರಾಗಿದ್ದ ಅಂಬರೀಶ್ ಕಾವೇರಿಗಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬಂದರು.

ಇಂದು ಕಾವೇರಿ ವಿಚಾರದಲ್ಲಿ ಪ್ರಧಾನಿ ಮಧ್ಯ ಪ್ರವೇಶಿಸಬೇಕು ಎನ್ನುತ್ತಿರುವವರು ಅಂದು ಏಕೆ ಮಾತನಾಡಲಿಲ್ಲ? ಎಂದು ಪ್ರಶ್ನಿಸಿದ ಸುಮಲತಾ ಪ್ರಧಾನಿಗಳ ಮಧ್ಯ ಪ್ರವೇಶದಿಂದ ಸಮಸ್ಯೆ ಬಗೆಹರಿಯುವಂತಿದ್ದರೆ ಅಂದಿನ ಪ್ರಧಾನಿಗಳೇ ಮಧ್ಯ ಪ್ರವೇಶಿಸುತ್ತಿದ್ದರೆಂದರು.

# ಕುಶಾಲತೋಪು ತಾಲೀಮು: ಬೆದರಿದ ಸುಗ್ರೀವ, ಹಿರಣ್ಯ



**■ ವಿಜಯಸಾಕ್ಷಿ ಸುದ್ದಿ, ಮೈಸೂರು**

ನಾಡ ಹಬ್ಬ ಮೈಸೂರು ದಸರಾದ ಪ್ರಮುಖ ಆಕರ್ಷಕಣೆ ಜಂಬೂ ಸವಾರಿ. ಈ ಜಂಬೂಸವಾರಿಯಲ್ಲಿ ಸಾಗುವ ಗಜಪಡೆಗಳ ತಾಲೀಮು ದಿನದಿಂದ ದಿನಕ್ಕೆ ಬದಲಾಗುತ್ತಾ ಹೋಗುತ್ತದೆ. ಇದೀಗ ದಸರಾ ಆನೆಗಳಿಗೆ ಸಿಡಿಮದ್ದಿನ ತಾಲೀಮು ಯಶಸ್ವಿಯಾಗಿ ನಡೆದಿದ್ದು, ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳುವ ಎಲ್ಲಾ ಆನೆಗಳಿಗೂ ಈ ತಾಲೀಮು ಮಾಡಿಸಲಾಗುತ್ತದೆ.

ಮೈಸೂರು ಅರಮನೆಯ ಮುಂಭಾಗದ ವಸ್ತು ಪ್ರದರ್ಶನ ಆವರಣದಲ್ಲಿ ತಾಲೀಮು ನಡೆಯಿತು. ನಗರ ಸಶಸ್ತ್ರ ಮೀಸಲು ಪಡೆಯ ಸಿಬ್ಬಂದಿ 7 ಫಿರಂಗಿ ಗಾಡಿಗಳಿಂದ ಒಟ್ಟು 21 ಬಾರಿ ಕುಶಾಲತೋಪು ಸಿಡಿಸಿ ಅಭ್ಯಾಸ ಮಾಡಿಸಿದರು. 7 ಪಿರಂಗಿಗಳ ಮೂಲಕ ಮೂರು ಸುತ್ತಿನ ತಾಲೀಮು ನಡೆಯಿತು. ತಾಲೀಮಿನಲ್ಲಿ 43 ಅಶ್ವಾರೋಹಿ ದಳಗಳು ಭಾಗವಹಿಸಿದ್ದವು. ವಿಜಯದಶಮಿಯಂದು 21 ಸುತ್ತಿನ ಕುಶಾಲತೋಪು ಸಿಡಿಸುವಾಗ ಹೊಮ್ಮುವ ಕಿವಿಗಡಚಿಕ್ಕುವ ಶಬ್ದಕ್ಕೆ ಕುದುರೆ, ಆನೆಗಳು ಬೆಚ್ಚದಂತೆ ಮಾಡಲು ಪೂರ್ವಭ್ಯಾಸ ನೀಡುವುದು ವಾಡಿಕೆ.

ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 14 ಆನೆಗಳು ಕುಶಾಲುತೋಪು ತಾಲೀಮಿನಲ್ಲಿ ಭಾಗಿಯಾಗಿದ್ದವು. ಸುಗ್ರೀವ ಹಾಗೂ ಹಿರಣ್ಯ ಆನೆಗಳು ಈ ಸಂದರ್ಭದಲ್ಲಿ ಬೆದರಿದವು. ಸಿಡಿಮದ್ದು ತಾಲೀಮಿಗೆ ಅಶ್ವಗಳು ಹೆದರಿದ್ದು ಕಂಡು ಬಂದಿತು.

# ಪ್ರತಿಭೆ ಪ್ರದರ್ಶಿಸಿ ದೇಶದ ಅಮೂಲ್ಯ ಆಸ್ತಿಗಳಾಗಿ

▸▸ ಮೊದಲನೇ ಪುಟದಿಂದ

ಆಕರ್ಷಕ ಪಥ ಸಂಚಲನ ನಡೆಸಿದರು. ಗಣ್ಯರು ಕ್ರೀಡಾ ಜ್ಯೋತಿಯನ್ನು ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಶ್ರೀವತ್ಸ, ದರ್ಶನ್ ಧ್ರುವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಸಿ ಎನ್ ಮಂಜೇಗೌಡ, ಕೆ ಹರೀಶ್ ಗೌಡ, ಮಂಜುನಾಥ ಎಂ ಆರ್, ಉಪ ಮಹಾ ಪೌರಾರದ ರೂಪ, ಒಲಂಪಿಕ್ ಅಸೋಸಿಯೇಶನ್ ಅಧ್ಯಕ್ಷರು ಹಾಗೂ ಸಿ ಎಂ ಕಾರ್ಯದರ್ಶಿಗಳಾದ ಗೋವಿಂದರಾಜು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ



**■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಮಹನೀಯರ ಜಯಂತಿ ಕಾರ್ಯಕ್ರಮಗಳಿಗೆ ಹಾಜರಾಗದ ಅಧಿಕಾರಿಗಳಿಗೆ ಕಾರಣ ಕೇಳಿ ನೋಟೀಸ್ ನೀಡಲಾಗುವುದು ಎಂದು ತಹಸೀಲ್ದಾರ ಗಿರೀಶಬಾಬು ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅ.28ರಂದು ಜರುಗುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪಟ್ಟಣದ ಸಾಮರ್ಥ್ಯ ಸೌಧದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಕಾರ್ಯಕ್ರಮಕ್ಕೆ ಸಂಘ-ಸಂಸ್ಥೆಯವರು ಹಾಗೂ ವಿವಿಧ ಸಮಾಜದ ಮುಖಂಡರಿಗೆ ಆಹ್ವಾನ ನೀಡಿ ಎಂದು ಸೂಚನೆ ನೀಡಿದರು.

ತಾಲೂಕು ವಾಲ್ಮೀಕಿ ನಾಯಕ ಸಮಾಜದ ಅಧ್ಯಕ್ಷ ಉಚ್ಚೆಂಗೆಪ್ಪ ಕೆ ಮಾತನಾಡಿ, ವಾಲ್ಮೀಕಿ ಜಯಂತಿಯ ವೇದಿಕೆ ಕಾರ್ಯಕ್ರಮಕ್ಕೆ ವಿವಿಧ ಸಮಾಜದ ಮುಖಂಡರಗಳನ್ನು ಆಹ್ವಾನಿಸಿ, ವಿವಿಧತೆಯಲ್ಲಿ ಏಕತೆ ಸಾರುವ ಕಾರ್ಯಕ್ರಮ ಮಾಡಬೇಕು ಎಂದು ಸಲಹೆ ನೀಡಿದರು.

ವಾಲ್ಮೀಕಿ ನಾಯಕ ಸಮಾಜದ ಮಾಜಿ ಅಧ್ಯಕ್ಷ ಎಚ್.ಟಿ ಗಿರೀಶಪ್ಪ, ಕಾರ್ಯದರ್ಶಿ ಗಿರಜ್ಜಿ ನಾಗರಾಜ, ಅಂಬೇಡ್ಕರ್ ಸಂಘದ ಅಧ್ಯಕ್ಷ ನಿಚ್ಚವನಹಳ್ಳಿ ಭೀಮಪ್ಪ, ಮಾದಿಗ ದಂಡೋರ ಸಮಿತಿಯ ಅಧ್ಯಕ್ಷ ಪುಣಭಗಟ್ಟಿ ನಿಂಗಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣಾಧಿಕಾರಿ ರೇಣುಕಾದೇವಿ, ಪುರಸಭೆ ಮುಖ್ಯಾಧಿಕಾರಿ ಯರಗುಡಿ ಶಿವಕುಮಾರ, ವಾಲ್ಮೀಕಿ ನಾಯಕ ಮಹಿಳಾ ಘಟಕದ ಅಧ್ಯಕ್ಷೆ ಕಂಚಿಕೇರಿ ಜಯಲಕ್ಷೀ, ನಿವೃತ್ತ ಮುಖ್ಯ ಶಿಕ್ಷಕ ಆನಂದಪ್ಪ, ಏಕಲವ್ಯ ಸಂಘರ್ಷ ಸಮಿತಿಯ ಅಧ್ಯಕ್ಷ ರಾಯದುರ್ಗದ ಪ್ರಕಾಶ, ಕಾರ್ಯದರ್ಶಿ ಶಿವರಾಜ, ಮುಖಂಡರಾದ ಮಂಡಕ್ಕಿ ಸುರೇಶ, ಮಾರುತಿ ಪೂಜಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.


**CHANGE OF NAME**

I, Farhana Banu Kalsad (Old Name) do hereby state that after marriage my name has been changed as FARHANA W/o ISUPAMAMMAD NADAF (New Name) for all future transactions. R/o Gadag, Tq:/Dist:Gadag, State: Karnataka. Both these names are one and the same and belongs to me only vide affidavit sworn before Notary S.K. Nadaf at Gadag on 10.10.2023.



**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್:uda-gadag@hotmail.com

ಸಂ: ನಅಪ್ರಾಗಬೆ/ಭೂ.ಉ.ಬ/ಎಲ್‌ಬಿಪಾಸ್-ನಂ 00072/2023-24/672 ದಿನಾಂಕ:07-10-2023

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಹಸಮುಕ ಮುಲ್ತಾನಮಲ್ಲಜಿ ಬಾಫಣಾ ಮತ್ತು ಶ್ರೀಮತಿ ನಿರ್ಮಲಾ ಹ. ಬಾಫಣಾ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ವಾಣಿಜ್ಯ ಚಟುವಟಿಕೆಗಳಿಂದಾಗಿ ಸಾರ್ವಜನಿಕರಿಗೆ ಉದ್ಯೋಗ ಅವಕಾಶಗಳು ದೊರೆಯುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ **14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 141/*/6 | 00ಎಕರೆ-11 ಗುಂಟೆ-00ಆಣೆ | ವಸತಿ | ವಾಣಿಜ್ಯ (ಮಳಿಗೆಗಳು) |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ./ಗದಗ/250/2023-24/ದೇಶಪಾಂಡೆಪಬ್ಲಿಸಿಟಿ

# ನಮೋ ಬ್ರಿಗೇಡ್ ಬೈಕ್ ರ್‍ಯಾಲಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

'ಮೂರನೇ ಬಾರಿ ಮೋದಿ ಜಯಭೇರಿ' ಎಂಬ ಘೋಷಣೆಯೊಂದಿಗೆ ನಮೋ ಬ್ರಿಗೇಡ್ ಮುಖ್ಯಸ್ಥ ಚಕ್ರವರ್ತಿ ಸೂಲಿಬೆಲೆ ಕಾರ್ಯಕರ್ತರೊಂದಿಗೆ ಇಲ್ಲಿಯ ಪ್ರಮುಖ ರಸ್ತೆಗಳಲ್ಲಿ ಬೈಕ್ ರ್‍ಯಾಲಿಯೊಂದಿಗೆ ಜಾಗೃತಿ ಮೂಡಿಸಿದರು.

ಚಕ್ರವರ್ತಿ ಸೂಲಿಬೆಲೆ ಅವರು 'ಜನ ಗಣ ಮನ ಬೆಸೆಯೋಣ' ಎಂಬ ಧ್ಯೇಯ ವಾಕ್ಯವನ್ನು ಬರೆದ ತಮ್ಮ ಬೈಕ್ ಮೂಲಕ ಜಾಥಾವನ್ನು ಕೈಗೊಂಡರು. ಇವರೊಂದಿಗೆ ಪ್ರಧಾನಿ ಮೋದಿ, ಸಂವಿದಾನ ಶಿಲ್ಪಿ ಬಿ.ಆರ್ ಅಂಬೇಡ್ಕರ, ಬಸವೇಶ್ವರರು, ಸುತ್ತೂರು ಮಠದ ಸ್ವಾಮಿಜೀಗಳ ಭಾವಚಿತ್ರವಿರುವ ವಾಹನವು ಜಾಥಾದಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು. ಇದಕ್ಕೂ ಪೂರ್ವ ಗ್ರಾಮದ ಹೊರ ವಲಯದ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರ್ಯಕರ್ತರು ಚಕ್ರವರ್ತಿ ಅವರನ್ನು ಶಾಲು, ಹೂಮಾಲೆ ಹಾಕಿ ಸ್ವಾಗತಿಸಿದರು.

# ಪೌರ ಕಾರ್ಮಿಕರಿಂದ ಜಿಲ್ಲಾಧಿಕಾರಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಯಲ್ಲಿರುವ 141 ಪೌರಕಾರ್ಮಿಕರು, 8 ಜನ ಲೋಡರ್ಸ್, 4 ಜನ ಕ್ಲೀನರ್‌ಗಳ ವಿಶೇಷ ನೇರ ನೇಮಕಾತಿಗೆ ಆದೇಶ ನೀಡಿದ ಪ್ರಯುಕ್ತ ಗದಗ ಜಿಲ್ಲಾಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಿದರು.

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ರಮೇಶ ವಾಯ್.ಹಲಗಿಯವರ ನೇತೃತ್ವದಲ್ಲಿ ಮುಂಡರಗಿ ಪುರಸಭೆಯ ಮುಖ್ಯಾಧಿಕಾರಿ ಎಂ.ಎ ನೂರುಲ್ಲಾಖಾನ್, ರೋಣ ಪುರಸಭೆಯ ಮುಖ್ಯಾಧಿಕಾರಿ ರಮೇಶ ಡಿ.ಗೊಂದಕರ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹನಮಂತ ಬಳ್ಳಾರಿ, ಶಾಖಾಧ್ಯಕ್ಷ ಬಸವರಾಜ ಛಲವಾದಿ, ಮೈಲಪ್ಪ ದೊಡ್ಡಮನಿ, ಮಲಿಯಪ್ಪ ದೊಡ್ಡಮನಿ, ಚಂದ್ರಶೇಖರ ದೊಡ್ಡಮನಿ, ನೀಲಪ್ಪ ಚಳ್ಳಮರದ, ಎಲ್ಲ ಶಾಖಾ ಸಂಘದ ಪದಾಧಿಕಾರಿಗಳು ಮತ್ತು ಜಿಲ್ಲೆಯ ಎಲ್ಲ ಪೌರ ನೌಕರರು ಉಪಸ್ಥಿತರಿದ್ದರು.

# ಕಂಬಳಕ್ಕೆ ಸರ್ಕಾರದಿಂದ 1 ಕೋಟಿ ರೂ ಸಹಾಯಧನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

20 ಕಂಬಳಗಳಿಗೆ ತಲಾ 5 ಲಕ್ಷದಂತೆ 1 ಕೋಟಿ ರೂ ಸಹಾಯಧನವನ್ನು ಈ ಹಿಂದಿನಂತೆ ನೀಡಲಾಗುವುದು. ದೇಸಿ ಹಾಗೂ ಐತಿಹಾಸಿಕವಾದ ಕಂಬಳ ಕ್ರೀಡೆಗೆ ಹೆಚ್ಚಿನ ಸಹಕಾರ ನೀಡಲಾಗುವುದು ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.



ನಗರದ ಅರಮನೆ ಮೈದಾನದಲ್ಲಿ ಬುಧವಾರ 'ಬೆಂಗಳೂರು ಕಂಬಳ– ನಮ್ಮ ಕಂಬಳ'ದ ಕರೆಪೂಜೆ (ಗುದ್ದಲಿ ಪೂಜೆ) ನೆರವೇರಿಸಿ ಮಾತನಾಡಿದ ಅವರು, ಕಂಬಳಕ್ಕೆ ಸಹಾಯಧನ ಬಿಡುಗಡೆ ವಿಚಾರವಾಗಿ ಮುಖ್ಯಮಂತ್ರಿಗಳು ಹಾಗೂ ಕನ್ನಡ ಸಂಸ್ಕೃತಿ ಇಲಾಖೆಯೊಂದಿಗೆ ಚರ್ಚೆ ನಡೆಸಲಾಗುವುದು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಸಮಾಜಗಳ ಸಂಘಟನೆಗೆ ಒಂದು ನೆಲೆ ಬೇಕು ಎಂದು ಶಾಸಕ ಅಶೋಕ್ ರೈ ಮನವಿ ಮಾಡಿದ್ದು, ಎಲ್ಲರೂ ಒಟ್ಟಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿ ಎಂದು ಹೇಳಿದರು. ಮನುಷ್ಯನ ಬಳಿ ತೆಗೆದುಕೊಂಡು ಹೋಗಲು ಏನೂ ಇಲ್ಲ. ತನ್ನ ಬಳಿ ಇರುವುದನ್ನೆಲ್ಲಾ ಬಿಟ್ಟು ಹೋಗಲೇಬೇಕು. ಆದರೆ ನಮ್ಮ ಸಂಸ್ಕೃತಿಯನ್ನು ಉಳಿಸಿ, ಪರಿಚಯಿಸಬೇಕು ಎಂದು ಶಾಸಕರಾದ ಅಶೋಕ್ ರೈ ಅವರ ನೇತೃತ್ವದಲ್ಲಿ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯ ಜನರು ಒಂದಾಗಿರುವುದು ಸಂತೋಷದ ವಿಚಾರ ಎಂದರು.

ಉಳಿಪೆಟ್ಟು ಬೀಳದೆ ಯಾವುದೇ ಶಿಲೆ ವಿಗ್ರಹ ಆಗುವುದಿಲ್ಲ. ಭೂಮಿ ಉಳದೆ ಯಾವುದೇ ಬೆಳೆ ಬೆಳೆಯಲು ಆಗುವುದಿಲ್ಲ. ಅದರಂತೆ ಅರಮನೆ ಮೈದಾನದಲ್ಲಿ ಒಂದಷ್ಟು ಅಭಿವೃದ್ಧಿ ಕೆಲಸಗಳನ್ನು ಈ ನೆಪದಲ್ಲಿ ಮಾಡಬೇಕು ಎಂದು ಹೇಳಿದರು.

### 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ-2023' ಅಂಗವಾಗಿ ಜಾಗೃತಿ ರಥ ಚಾಲನಾ ಕಾರ್ಯಕ್ರಮ

# ಮಾನಸಿಕ ಆರೋಗ್ಯಕ್ಕೂ ಪ್ರಾಮುಖ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ದೈಹಿಕ ಆರೋಗ್ಯದಂತೆ ಮಾನಸಿಕ ಆರೋಗ್ಯಕ್ಕೂ ಹೆಚ್ಚು ಪ್ರಾಮುಖ್ಯತೆ ನೀಡಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ತಿಳಿಸಿದರು.

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ ವಿಭಾಗ, ವೈದ್ಯಕೀಯ ಮಹಾವಿದ್ಯಾಲಯ, ಮಾನಸಿಕ ಆರೋಗ್ಯ ವಿಭಾಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಗದಗ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ-2023' ಅಂಗವಾಗಿ ಜಾಗೃತಿ ರಥಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



> ಮಾನಸಿಕ ಅಸ್ವಸ್ಥರಿಗೆ ಗೌರವ ನೀಡಿ ಅವರನ್ನು ಮುಖ್ಯ ವಾಹಿನಿಗೆ ತರುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ. ಮಾನಸಿಕ ಅನಾರೋಗ್ಯಕ್ಕೆ ಕಾರಣವಾಗಿರುವ ಒತ್ತಡವನ್ನು ನಿರ್ವಹಿಸುವ ಕಲೆಯನ್ನು ಎಲ್ಲರೂ ಅಳವಡಿಸಿಕೊಳ್ಳಬೇಕಿದೆ.
>
> – ಕೆ.ಗುರುಪ್ರಸಾದ.
> ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ.

ಇತ್ತೀಚಿನ ದಿನಗಳಲ್ಲಿ ಹೆಚ್ಚು ಒತ್ತಡದ ಕಾರಣದಿಂದ ಮಾನಸಿಕ ಖಾಯಿಲೆಗಳು ಜನ ಸಾಮಾನ್ಯರಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿವೆ. ಜನರಲ್ಲಿ ಮಾನಸಿಕ ಖಾಯಿಲೆಗಳ ಕುರಿತು ಅರಿವು ಇಲ್ಲದ ಕಾರಣ ಚಿಕಿತ್ಸೆಗೆ ಬರುವುದು ಬಹು ವಿರಳವಾಗಿದೆ. ಮಾನಸಿಕ ಆರೋಗ್ಯ ಹಾಗೂ ಖಾಯಿಲೆಗಳ ಕುರಿತು ಹೆಚ್ಚು ಅರಿವು ಮೂಡಿಸುವುದು ಅವಶ್ಯವಾಗಿದೆ. ದೈಹಿಕ ಆರೋಗ್ಯಕ್ಕೆ ಎಷ್ಟು ಪ್ರಾಮುಖ್ಯತೆ ನೀಡುತ್ತೇವೆಯೋ ಅದಕ್ಕಿಂತ ಹೆಚ್ಚು ಮಾನಸಿಕ ಆರೋಗ್ಯಕ್ಕೆ ಪ್ರಾಮುಖ್ಯತೆ ನೀಡಬೇಕು. ಮಾನಸಿಕ ಅಸ್ವಸ್ಥರಿಗೆ ಗೌರವ ನೀಡಿ ಅವರನ್ನು ಮುಖ್ಯ ವಾಹಿನಿಗೆ ತರುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ. ಮಾನಸಿಕ ಅನಾರೋಗ್ಯಕ್ಕೆ ಕಾರಣವಾಗಿರುವ ಒತ್ತಡವನ್ನು ನಿರ್ವಹಿಸುವ ಕಲೆಯನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಕೆ.ಗುರುಪ್ರಸಾದ ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ. ರಾಘವೇಂದ್ರ ಪಾಟೀಲ್, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ, ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ, ಜಿಲ್ಲಾ ಕಾರ್ಯಕ್ರಮ ಸಂಯೋಜಕ ಡಾ. ರವಿ ಕಡಗಾವಿ, ಜಿಲ್ಲಾ ಸಲಹೆಗಾರರಾದ ಗೋಪಾಲ ಸುರಪುರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೈ.ಎನ್ ಕಡೇಮನಿ, ವಾಯ್.ವಾಯ್ ಹಕ್ಕಿ, ಸಿಬ್ಬಂದಿಗಳಾದ ಗೀತಾ ಕಾಂಬಳೆ, ಎಸ್.ದೇವರವರ, ಎಸ್.ಎಸ್ ಕುಬಸದ, ಶ್ರೀಧರ ಎಮ್.ಸಿ, ವಿನಾಯಕ ಕಾಳೆ, ನಾಗರಾಜ ಜೋಗೀನ್, ವಿನಾಯಕ ವಾಗಮೋರೆ, ಶೋಭಾ ವಡ್ಡರ, ಶಿರಸ್ತೇದಾರ ಬಿ.ಎಮ್ ಕುಕನೂರ, ಗದಗ ತಾಲೂಕಾ ಆರೋಗ್ಯ ಅಧಿಕಾರಿ ಕಛೇರಿಯ ಸಿಬ್ಬಂದಿಗಳು, ಕಛೇರಿ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

ಡಾ. ರಾಜೇಂದ್ರ ಬಸರಿಗಿಡದ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಕಾಂಬಳೆ ವಂದಿಸಿದರು.

# ಹಾಸನಾಂಬ ಜಾತ್ರಾ ಮಹೋತ್ಸವ ಯಶಸ್ಸಿಗೆ ಕರೆ

■ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನಾಂಬ ಜಾತ್ರಾ ಮಹೋತ್ಸವವನ್ನು ಆತ್ಯಂತ ವಿಜ್ರಂಭಣೆಯಿಂದ ಆಚರಿಸುವ ಮೂಲಕ ಇತಿಹಾಸದಲ್ಲಿ ಉಳಿಯುವಂತೆ ಮಾಡಲು ಎಲ್ಲಾ ಅಧಿಕಾರಿಗಳು ಆಸಕ್ತಿ ವಹಿಸಿ ಕ್ರಿಯಾಶೀಲರಾಗಿ ಕರ್ತವ್ಯ ನಿರ್ವಹಿಸುವ ಮೂಲಕ ಯಶಸ್ವಿಗೊಳಿಸುವಂತೆ ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ಎನ್. ರಾಜಣ್ಣ ಅವರು ಅಧಿಕಾರಿಗಳಿಗೆ ಕರೆ ನೀಡಿದರು.



ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಬುಧವಾರ ಹಾಸನಾಂಬ ಜಾತ್ರಾ ಮಹೋತ್ಸವ ಸಿದ್ಧತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಳೆದ ವರ್ಷ 6 ಲಕ್ಷ ಜನರು ದೇವಿ ದರ್ಶನ ಪಡೆದಿದ್ದು, ಈ ಬಾರಿ ಅಂದಾಜು 10 ಲಕ್ಷ ಜನರು ಬರುವ ನಿರೀಕ್ಷೆ ಇದೆ. ಶಕ್ತಿ ಯೋಜನೆ ಜಾರಿಯಲ್ಲಿರುವ ಕಾರಣ ರಾಜ್ಯದ ಎಲ್ಲಾ ಭಾಗಗಳಿಂದ ಹೆಣ್ಣು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ದೇವಿ ದರ್ಶನಕ್ಕೆ ಆಗಮಿಸಲಿದ್ದಾರೆ ಎಂದ ಸಚಿವರು ಭಕ್ತಾದಿಗಳಿಗೆ ಯಾವುದೇ ಅನಾನುಕೂಲವಾಗದಂತೆ ಎಚ್ಚರವಹಿಸಿ ಎಲ್ಲಾ ರೀತಿಯ ಸೂಕ್ತ ಸಿದ್ಧತೆಗೆ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಬಾರಿ ದಿನದ 24 ಗಂಟೆಯು ದೇವಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುತ್ತಿದ್ದು, ಸರತಿ ಸಾಲಿನಲ್ಲಿ ಸಾಗಿಬರುವ ಭಕ್ತಾಧಿಗಳಿಗೆ ತೊಂದರೆಯಾಗದಂತೆ ನೆರಳಿನ ವ್ಯವಸ್ಥೆ, ಕುಡಿಯುವ ನೀರು, ಪ್ಯಾನ್ ವ್ಯವಸ್ಥೆ ಜೊತೆಗೆ ಗರ್ಭ ಗುಡಿಯಲ್ಲಿ ನಡೆಯುವ ಪೂಜೆ ವೀಕ್ಷಣೆ ಮಾಡಲು ಅನುಕೂಲವಾಗುವಂತೆ ಎಲ್.ಇ.ಡಿ. ಪರದೆ ಹಾಗೂ ಟಿ.ವಿ.ಗಳನ್ನು ಅಳವಡಿಕೆಗೆ ಕ್ರಮವಹಿಸುವಂತೆ ಸಚಿವರು ಸೂಚಿಸಿದರು.

ಜನ ಸಂದಣಿಯನ್ನು ನಿರ್ವಹಣೆ ಮಾಡಲು ಸಹಾಯವಾಗುವಂತೆ ವಾರ್ ರೂಂ ತೆರೆದು ಕಾಲಕಾಲಕ್ಕೆ ವಾಕಿಟಾಕಿ ಮೂಲಕ ಮಾಹಿತಿ ನೀಡಲು ಕ್ರಮವಹಿಸಿ ಎಂದ ಸಚಿವರು, 8 ಕಡೆಗಳಲ್ಲಿ ತಾತ್ಕಾಲಿಕವಾಗಿ ನಿರ್ಮಿಸುವ 50 ಶೌಚಾಲಯಗಳ ನಿರಂತರ ಸ್ವಚ್ಛತೆಗೆ ನಿಗಾವಹಿಸಿ ಎಂದು ತಿಳಿಸಿದರಲ್ಲದೆ, ಜನ ಸಂದಣಿಯನ್ನು ನೋಡಿಕೊಂಡು ಅಗತ್ಯವಿದ್ದಲ್ಲಿ ಹೆಚ್ಚಿನ ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ತಿಳಿಸಿದರು.

ಯಾವ ಸ್ಥಳದಲ್ಲಿ ಹೆಚ್ಚು ಜನ ಸಂದಣಿ ಇರುತ್ತದೆ ಎಂಬುದನ್ನು ಗಮನಿಸಿ ನಿರ್ವಹಣೆಗೆ ತಂಡಗಳನ್ನು ನಿಯೋಜಿಸಿ ಎಂದು ತಿಳಿಸಿದರಲ್ಲದೆ, ಭಕ್ತಾಧಿಗಳಿಗೆ ಗುಣ ಮಟ್ಟದ ಪ್ರಸಾದ ನೀಡಲು ನಿಗಾವಹಿಸುವಂತೆ ತಿಳಿಸಿದರು.

ದೇವಿ ದರ್ಶನಕ್ಕೆ ಬರುವ ಭಕ್ತಾಧಿಗಳು ಸಮಾದಾನದಿಂದ ದರ್ಶನ ಪಡೆದು ಹಿಂದಿರುಗಲು ಅಗತ್ಯ ಕ್ರಮವಹಿಸಿ ಎಂದ ಸಚಿವರು, ಜಾತ್ರಾ ಸಂದರ್ಭದಲ್ಲಿ ಅಗತ್ಯ ಕೆ.ಎಸ್.ಆರ್.ಟಿ.ಸಿ ಬಸ್‌ಗಳ ವ್ಯವಸ್ಥೆಗೆ ಯೋಜನೆ ತಯಾರಿಸಿಕೊಂಡು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸಹಾಯವಾಣಿ ತೆರೆದು ಸಾರ್ವಜನಿಕರಿಂದ ಬೇಡಿಕೆ ಬಂದ 10 ರಿಂದ 15 ನಿಮಿಷದಲ್ಲಿ ಬಸ್ ವ್ಯವಸ್ಥೆ ಕಲ್ಪಿಸಿ ಎಂದು ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳಿಗೆ ಸೂಚಿಸಿದರು.

ಹಾಸನಕ್ಕೆ ಪ್ರವೇಶವಾದ ತಕ್ಷಣ ದೇವಸ್ಥಾನಕ್ಕೆ ಬರುವ ಮಾರ್ಗ ಕುರಿತು ಮಾರ್ಗಸೂಚಿ ಫಲಕಗಳನ್ನು ಅಳವಡಿಸುವಂತೆ ಸಚಿವರು ತಿಳಿಸಿದರು. ಎಲ್ಲಾ ಹಿರಿಯ ಹಾಗೂ ಕಿರಿಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉತ್ತಮವಾಗಿ ಕೆಲಸ ಮಾಡುವ ಮೂಲಕ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಿ ಜಿಲ್ಲೆಗೆ ಕೀರ್ತಿ ತರುವಂತೆ ತಿಳಿಸಿದರು.

ನಂತರ ಜಿಲ್ಲಾ ಉಸ್ತುವಾರಿ ಸಚಿವರು ದೇವಸ್ಥಾನಕ್ಕೆ ಭೇಟಿ ನೀಡಿ ಸಿದ್ಧತೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಹಲವು ಸಲಹೆ ಸೂಚನೆಗಳನ್ನು ನೀಡಿದರು.

ಜಿಲ್ಲಾಧಿಕಾರಿ ಸತ್ಯಭಾಮ ಮಾತನಾಡಿ, ಸಚಿವರ ನಿರ್ದೇಶನದಂತೆ ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದು– ಕೊಂಡು ಸಿದ್ಧತೆಗೆ ಕ್ರಮವಹಿಸಲಾಗಿದೆ. ಎಲ್ಲರೂ ಒಟ್ಟಾಗಿ ಸೇರಿ ಕರ್ತವ್ಯ ನಿರ್ವಹಿಸುವುದರ ಮೂಲಕ ಜಾತ್ರೆ ಯಶಸ್ವಿಗೊಳಿಸೋಣ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ. ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜಿತಾ, ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ ಉಪಸ್ಥಿತರಿದ್ದರು. ಉಪ ವಿಭಾಗಾಧಿಕಾರಿ ಮಾರುತಿ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

### ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಸಂತೋಷ ಲಾಡ್

# ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ರೇಣುಕಾ ಜಲಾಶಯ ಹಾಗೂ ನೀರಸಾಗರದಿಂದ ಜಿಲ್ಲೆಗೆ ಅವಶ್ಯಕವಾಗಿ ಬೇಕಾಗಿರುವ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. ಈಗಾಗಲೇ ಜಿಲ್ಲೆಯ ಕೆರೆಗಳನ್ನು ತುಂಬಿಸಲಾಗಿದೆ. ಕೆಲವು ಕಡೆಗಳಲ್ಲಿ ಬೋರವೆಲ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳು ಕ್ರಮವಹಿಸಬೇಕಿದೆ ಎಂದು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಬುಧವಾರ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಸಭೆಗೆ ಬರುವ ಮುನ್ನ ಇಲಾಖೆಯ ಅಧಿಕಾರಿಗಳು ಎಲ್ಲಾ ಕಾರ್ಯಕ್ರಮಗಳ ವರದಿಗಳನ್ನು ಅಂಕಿ ಅಂಶಗಳನ್ನು ಸಮಗ್ರ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದು ಸಚಿವರು ಕಟ್ಟುನಿಟ್ಟಾಗಿ ಸೂಚಿಸಿದರು.

ಹುಬ್ಬಳ್ಳಿ ಪ್ಲೈ ಓವರ್ ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸಬೇಕು. ಗ್ರಾಮೀಣ ಭಾಗದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಕಾರ್ಯೋನ್ಮುಖರಾಗಬೇಕು. ಕೆಲವು ಕಡೆಗಳಲ್ಲಿ ಹೊಲಗಳಿಗೆ ಹೋಗಲು ಸಹ ಯಾವುದೇ ದಾರಿ ಇರುವುದಿಲ್ಲ. ಹೀಗಾಗಿ ರೈತರು ಹೊಲಗಳಿಗೆ ತೆರಳಲು ದಾರಿಗಳನ್ನು ನಿರ್ಮಿಸಬೇಕಿದೆ. ರೇಷ್ಮೆ, ತೋಟಗಾರಿಕೆ, ವಾಣಿಜ್ಯ ಹಾಗೂ ಪ್ರಮುಖ ಆಹಾರ ಬೆಳೆಗಳನ್ನು ಬೆಳೆಯುವಂತೆ ರೈತರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಅಲ್ಲದೇ ಈ ಭಾಗದಲ್ಲಿ ನವಲೂರು ಪೇರಲ, ಧಾರವಾಡದ ಆಪೂಸ್ ಮಾವು ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯುವಂತೆ ಪ್ರಚಾರ ಮಾಡುವ ಮೂಲಕ ರೈತರಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ಆ ನಿಟ್ಟಿನಲ್ಲಿ ಅಧಿಕಾರಿಗಳು ಸರ್ಕಾರದ ಯೋಜನೆ ಹಾಗೂ ಸಹಾಯಧನದ ಕುರಿತು ಮಾಹಿತಿ ನೀಡಬೇಕಿದೆ ಎಂದು ತಿಳಿಸಿದರು.

> ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಡಿಸೆಂಬರ್ ಅಂತ್ಯದವರೆಗೆ ಮೇವಿನ ಕೊರತೆ ಆಗುವುದಿಲ್ಲ. ಮುಂದಿನ ದಿನಗಳಲ್ಲಿ ಮೇವು ಸಂಗ್ರಹಕ್ಕೆ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗುವುದು. ಜಿಲ್ಲೆಯಲ್ಲಿ ಕೆರೆಗಳಿಗೆ ನೀರು ತುಂಬಿಸಲಾಗಿದ್ದು, ನೀರಿನ ಕೊರತೆ ಆಗದಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಬೋರವೆಲ್ ಹಾಗೂ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತದೆ. ಬೆಳೆ ಪರಿಹಾರದ ಕುರಿತು ಇನ್ಸುರೆನ್ಸ್ ಕಂಪನಿಯೊಂದಿಗೆ ಮಾತುಕತೆ ನಡೆಸಲಾಗುವುದು.
>
> **–ಗುರುದತ್ತ ಹೆಗಡೆ,** ಜಿಲ್ಲಾಧಿಕಾರಿಗಳು, ಧಾರವಾಡ

> ಗದಗ, ಹಾವೇರಿ ಜಿಲ್ಲೆಗಳಂತೆ ರೈತರಿಗೆ ಮಧ್ಯಂತರ ಬೆಳೆ ವಿಮೆ ಪರಿಹಾರ ಒದಗಿಸಬೇಕಾಗಿದೆ. ರೈತರಿಗೆ ಪರಿಹಾರ ಕೊಡಿಸಿದರೆ ನೆಮ್ಮದಿ ಸಿಗಲಿದೆ. ಈಗಾಗಲೇ ಕೇಂದ್ರ ಬರ ಅಧ್ಯಯನ ತಂಡಕ್ಕೆ ಜಿಲ್ಲೆಯಲ್ಲಿನ ಬರದ ಪರಿಸ್ಥಿತಿಯನ್ನು ಸಂಪೂರ್ಣವಾಗಿ ವಿವರಿಸಿ, ವರದಿ ಸಲ್ಲಿಸಲಾಗಿದೆ.
>
> **–ಎನ್.ಎಚ್. ಕೋನರೆಡ್ಡಿ,** ಶಾಸಕರು, ನವಲಗುಂದ

ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಟ್ಟು, ಪೋಷಿಸಬೇಕು. ಪಶು ಸಂಜೀವಿನಿ ಬಗ್ಗೆ ಹೆಚ್ಚಿನ ಪ್ರಚಾರ ಮಾಡಬೇಕಿದೆ. ಇದರಿಂದ ರೈತರ ಜಾನುವಾರಗಳಿಗೆ ಅನುಕೂಲವಾಗಲಿದೆ. ಯಾವುದೇ ಸಂದರ್ಭದಲ್ಲಿ ಜಾನುವಾರುಗಳಿಗೆ ಕಾಯಿಲೆಗಳು ಬಂದಾಗ ಸಹಾಯವಾಣಿ ಸಂಖ್ಯೆ 1962 ಗೆ ಕರೆ ಮಾಡಬಹುದು. ಮೀನುಗಾರಿಕೆ ಬಗ್ಗೆ ರೈತರಿಗೆ ಮಾಹಿತಿ ಒದಗಿಸಬೇಕಿದೆ. ಎಲ್ ಆ್ಯಂಡ್ ಟಿ ಕಂಪನಿಯವರ ಕಾರ್ಯವೈಖರಿ ಅಷ್ಟಾಗಿ ಹೇಳಿಕೊಳ್ಳುವಂತಿಲ್ಲ. ಮುಂದಿನ ಸಭೆಗೆ ಮೇಲಾಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಜಿಲ್ಲೆಯಲ್ಲಿನ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ತ್ವರಿತಗತಿಯಲ್ಲಿ ನಡೆಯಬೇಕು. ಮುಂಬರುವ ಸಭೆಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಇಲಾಖೆಯಲ್ಲಿ ಕೈಗೊಳ್ಳಲಾದ ಮತ್ತು ಪ್ರಗತಿಯ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚಿಸಿದರು.

### ಸಣ್ಣ ನೀರಾವರಿ ಮುಖ್ಯ ಇಂಜಿನಿಯರ್‌ಗೆ ನೋಟಿಸ್ ನೀಡಲು ಸೂಚನೆ

ಕೆಡಿಪಿ ಸಭೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ಬಗ್ಗೆ ಸರಿಯಾದ ವರದಿ ನೀಡದ ಹಿನ್ನೆಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ಮುಖ್ಯ ಇಂಜಿನಿಯರ್ ಎನ್.ಎಸ್. ಭಜಂತ್ರಿ ಅವರಿಗೆ ನೋಟಿಸ್ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರಿಗೆ ಸೂಚಿಸಿದರು. ಅಧಿಕಾರಿಗಳು ಕೆಡಿಪಿ ಸಭೆಯನ್ನು ಗಂಭೀರವಾಗಿ ಪರಿಗಣಿಸತಕ್ಕದು ಎಂದು ಎಚ್ಚರಿಸಿದರು.



ಕರ್ನಾಟಕ ಸರ್ಕಾರದ ವಿಧಾನ ಪರಿಷತ್ತಿನ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಮಾತನಾಡಿ, ಜಾನುವಾರುಗಳಿಗೆ ಕಾಲುಬಾಯಿ ಬೇನೆ, ಗಂಟಲು ಬೇನೆ, ಚಪ್ಪೆ ಬೇನೆ, ಕಂದು ರೋಗದ ಲಸಿಕೆಗಳನ್ನು ಹಾಕಬೇಕು. ಕುರಿ ಮತ್ತು ಮೇಕೆಗಳಿಗೆ ಕರಳು ಬೇನೆ ಹಾಗೂ ಇತರ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಲಸಿಕೆ ಹಾಕಿಸಬೇಕು. ಕಾಮಧೇನು, ಅನುಗ್ರಹ ಯೋಜನೆಗಳ ಕುರಿತು ರೈತರಿಗೆ ಜಾಗೃತಿ ಮೂಡಿಸಬೇಕಿದೆ. ವಿವಿಧ ಯೋಜನೆಗಳಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಸಹಾಯಧನವನ್ನು ನೀಡಬೇಕು.

ಮುಂಗಾರು ಮಳೆ ಕೊರತೆಯಿಂದ ಮೇವಿನ ಸಮಸ್ಯೆ ಉಲ್ಬಣಗೊಳ್ಳಲಿದೆ. ಗ್ರಾಮೀಣ ಭಾಗದಲ್ಲಿ ಮೇವಿನ ಕೊರತೆ ಆಗದಂತೆ ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು.

ಸಭೆಯಲ್ಲಿ ಶಾಸಕರಾದ ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ, ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ್, ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ್, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೋನಲ್ ವೃಷ್ಣಿ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ಈಶ್ವರ ಉಳ್ಳಾಗಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಸೀಲ್ದಾರರು, ತಾಲೂಕು ಮಟ್ಟದ ಅಧಿಕಾರಿಗಳು ಇತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka